# ಹಂಪಿ ಟೈಮ್ಸ್

HAMPI TIMES

ಕನ್ನಡ ದಿನಪತ್ರಿಕೆ
KANNADA DAILY

ಸಂಪಾದಕ: ಬಸಾಪುರ ಬಸವರಾಜ
EDITOR: BASAPUR BASAVARAJA

epaper.hampitimes.com | e-mail: hampitimes@gmail.com | M:94486 33038 Reg.No.PMG/KA/NK/BLY/01/2024-2026

| | | | | | | | |
|---|---|---|---|---|---|---|---|
| ಸಂಪುಟ:02 | ಸಂಚಿಕೆ: 309 | ಪಿ.ಆರ್.ಜಿ.ಐ.ನಂ.:KARKAN/2023/88055 | ವಿಜಯನಗರ | 19.06.2025 | ಗುರುವಾರ | ಪುಟ:04 | ಬೆಲೆ:2 |
| Volume:02 | Issue: 309 | PRGI No:KARKAN/2023/88055 | VIJAYANAGARA | 19.06.2025 | Thursday | Page:04 | Rs:2 |



Grow with Us, Advertise in Hampi Times

Print & Digital Media



“Looking to bring your sales and services to readers Fingertips? HAMPI TIMES is the ideal platform”

Call:9448633038/email:hampitimes@gmail.com



DC & SSLC TOPER TALK

scan to watch video



ಸರ್ಕಾರಿ ಶಾಲೆ, ನಮ್ಮ ಶಾಲೆ
ಗುಣಮಟ್ಟದ ಶಿಕ್ಷಣಕ್ಕೆ ಮೊದಲ ಹೆಜ್ಜೆ

(Government school, our school - the first step towards quality education.)

ಸರ್ಕಾರಿ ಶಾಲೆಗಳಲ್ಲಿ 2025-26ನೇ ಸಾಲಿನ ಪ್ರವೇಶ ಉಚಿತ

FREE Admission

ಬನ್ನಿ, ಬೆಂಬಲಿಸಿ, ಸರ್ಕಾರಿ ಶಾಲೆಗಳನ್ನು ಬಲಪಡಿಸಿ (Come, support, strengthen government schools.) - ಹಂಪಿ ಟೈಮ್ಸ್ ಬಳಗ, ವಿಜಯನಗರ


# ಎಲ್ಲಾ ವಾರ್ಡ್‌ಗಳಿಗೆ ಶುದ್ಧ ನೀರು ಒಳಚರಂಡಿ ಕಲ್ಪಿಸಿ

## ಐದನೇ ರಾಜ್ಯ ಹಣಕಾಸು ಆಯೋಗದ ಅಧ್ಯಕ್ಷ ಡಾ.ಸಿ.ನಾರಾಯಣಸ್ವಾಮಿ ಅಧಿಕಾರಿಗಳಿಗೆ ಸೂಚನೆ

**ಹಂಪಿ ಟೈಮ್ಸ್ ಹೊಸಪೇಟೆ**

ನಗರದಲ್ಲಿ ಸಾರ್ವಜನಿಕರಿಗೆ ಶುದ್ದ ಕುಡಿಯುವ ನೀರು ಸರಬರಾಜು ಹಾಗೂ ಒಳಚರಂಡಿ ವ್ಯವಸ್ಥೆಯ ಯುಜಿಡಿ ಸಮಸ್ಯೆಯನ್ನು ಶೀಘ್ರ ಪರಿಹರಿಸುವಂತೆ ಐದನೇ ರಾಜ್ಯ ಹಣಕಾಸು ಆಯೋಗದ ಅಧ್ಯಕ್ಷ ಡಾ.ಸಿ.ನಾರಾಯಣಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ನಗರಸಭೆ ಸಭಾಂಗಣದಲ್ಲಿ ಏರ್ಪಡಿಸಿದ್ದ ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳ 5ನೇ ರಾಜ್ಯ ಹಣಕಾಸು ಆಯೋಗದ ಸಭೆಯಲ್ಲಿ ಅವರು ಬುಧವಾರ ಮಾತನಾಡಿದರು. ನಗರದ ಎಲ್ಲ ವಾರ್ಡಗಳಿಗೆ ನಿಗಧಿತ ವೇಳೆಗೆ ಕುಡಿಯುವ ನೀರು ಸರಬರಾಜು ಹಾಗೂ ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸಬೇಕು. ಕುಡಿಯುವ ನೀರಿನ ಪೈಪ್‌ಲೈನ್‌ಗಳನ್ನು ವೈಜ್ಞಾನಿಕವಾಗಿ ಅಳವಡಿಸಬೇಕು. ಅಭಿವೃದ್ಧಿಗೆ ಆದ್ಯತೆ ನೀಡಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಅನುದಾನವನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು. ಅನಗತ್ಯ ಕ್ರಿಯಾ ಯೋಜನೆ ರೂಪಿಸಿ ಸರ್ಕಾರದ ಹಣವನ್ನು ದುರ್ಬಳಕೆ ಮಾಡಿಕೊಳ್ಳದಂತೆ ಎಚ್ಚರಿಕೆ ನೀಡಿದರು.





ನಗರಸಭೆ ಅಧ್ಯಕ್ಷ ರೂಪೇಶ್ ಕುಮಾರ್ ಮಾತನಾಡಿ, ಆಡಳಿತ ಸುಧಾರಣೆಗೆ ನಗರಸಭೆ ಅಧಿಕಾರಿಗಳಿಗೆ, ನೌಕರರಿಗೆ ಆಡಳಿತ ನಿರ್ವಹಣಾ ತರಬೇತಿಗಳನ್ನು ಕ್ರಮಬದ್ದವಾಗಿ ಆಯೋಜನೆ ಮಾಡಬೇಕು. ವೈಚಾರಿಕ ಮತ್ತು ವೈಜ್ಞಾನಿಕ ಆಡಳಿತಕ್ಕೆ ಪೂರಕವಾಗಿ ಆಡಳಿತ ಸಿಬ್ಬಂದಿಯನ್ನು ನೇಮಿಸಲು ವೃಂದ ನೇಮಕಾತಿಗಳಲ್ಲಿ ಅವಕಾಶ ಕಲ್ಪಿಸಬೇಕು. ನಗರಸಭೆ ವ್ಯಾಪ್ತಿಯಲ್ಲಿ ನಿಗಧಿತ ವೇಳೆಗೆ ಕುಡಿಯುವ ನೀರನ್ನು ಒದಗಿಸಬೇಕಿದೆ. ಇನ್ನೂ ಕೆಲವು ವಾರ್ಡ್ಗಳಿಗೆ ನೀರು ಸರಬರಾಜು ಮಾಡಲು ಅನುದಾನ ಒದಗಿಸಬೇಕಿದೆ. ಅಂಗನವಾಡಿ ಮತ್ತು ಶಾಲಾ ಕಾಲೇಜುಗಳ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಅನುದಾನ ಬೇಕಾಗಿದೆ. ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿಗಳ ನಿರ್ವಹಣೆ ಮಾಡಲು ಸರ್ಕಾರ ಸಂಬಂಧಿಸಿದ ಇಲಾಖೆಗಳ ಲೆಕ್ಕ ಶೀರ್ಷಿಕೆಗಳಿಂದ ಈ ವೆಚ್ಚಗಳನ್ನು ಅನುಪಾತದ ಮಾದರಿಯಲ್ಲಿ ಹಂಚಿಕೆ ಮಾಡಬೇಕು. ಹಣಕಾಸು ಆಯೋಗದ ಮುಂದೆ ವಿವಿಧ ಬೇಡಿಕೆಗಳು ಮತ್ತು ಸಲಹೆಗಳನ್ನು ಸಲ್ಲಿಸಿದರು.

ಪೌರಾಯುಕ್ತರಾದ ಸಿ.ಚಂದ್ರಪ್ಪ ಮಾತನಾಡಿ, 5ನೇ ರಾಜ್ಯ ಹಣಕಾಸು ಆಯೋಗದ ಮಾಹಿತಿಯನ್ನು ನೀಡಿ ನಗರದಲ್ಲಿ 35 ವಾರ್ಡ್ಗಳಿದ್ದು, ಪ್ರತಿ ವಾರ್ಡ್ಗಳಲ್ಲಿ ಚುನಾಯಿತ ಪ್ರತಿನಿಧಿಗಳು ಇದ್ದಾರೆ. ನಗರಸಭೆಯಲ್ಲಿ ಒಟ್ಟು 540 ಹುದ್ದೆಗಳಿವೆ. ಅವುಗಳಲ್ಲಿ 240 ಹುದ್ದೆಗಳು ಭರ್ತಿಯಾಗಿದ್ದು, ಪ್ರಸ್ತುತ 300 ಹುದ್ದೆಗಳು ಖಾಲಿ ಇವೆ. 156 ಖಾಯಂ ಪೌರಕಾರ್ಮಿಕರು ಹಾಗೂ ಹೊರಗುತ್ತಿಗೆಯಲ್ಲಿ 55 ಪೌರಕಾರ್ಮಿಕರು ಸೇರಿದಂತೆ ಒಟ್ಟು 211 ಪೌರಕಾರ್ಮಿಕರು ಕಾರ್ಯ ನಿರ್ವಹಿಸುತ್ತಿದ್ದಾರೆಂದು ಮಾಹಿತಿ ನೀಡಿದರು.

ಈ ವೇಳೆಯಲ್ಲಿ 5ನೇ ರಾಜ್ಯ ಹಣಕಾಸು ಆಯೋಗ ಸದಸ್ಯರಾದ ಮಹಮ್ಮದ್ ಸನಾವುಲ್ಲ, ಆರ್. ಎಸ್.ಫೋಂಡೆ, ಸಮಾಲೋಚಕರಾದ ಸುಪ್ರಸನ್ನ, ಕೆಂಪೇಗೌಡ, ಅಪ್ತಕಾರ್ಯದರ್ಶಿ ಎಲಕ್ಕಿ ಗೌಡ, ನಗರಸಭೆ ಉಪಾಧ್ಯಕ್ಷ ರಮೇಶ್ ಗುಪ್ತ, ಸ್ಥಾಯಿ ಸಮಿತಿ ಅಧ್ಯಕ್ಷ ಕಿರಣ್ ಶಂಕ್ರಿ ಸೇರಿದಂತೆ ನಗರಸಭೆಯ ಸದಸ್ಯರು ಭಾಗವಹಿಸಿದ್ದರು.

# ವಲಸೆ ತಡೆಗೆ ಉದ್ಯೋಗ ಕಲ್ಪಿಸಿ

## ಆರ್ಥಿಕಾಭಿವೃದ್ಧಿಗೆ ಪ್ರವಾಸೋದ್ಯಮ ಮುಖ್ಯ

### ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಅಧ್ಯಕ್ಷ ಪ್ರೊ.ಎಂ.ಗೋವಿಂದರಾವ್ ಅವರಿಗೆ ಜಿಲ್ಲೆಯ ಶಾಸಕರು ಒತ್ತಾಯ




**ಹಂಪಿ ಟೈಮ್ಸ್ ಹೊಸಪೇಟೆ**

ಜಿಲ್ಲೆಯಲ್ಲಿ ಯಾವ ರೀತಿಯ ಬದಲಾವಣೆ ಅಗತ್ಯವಿದೆ. ಅಭಿವೃದ್ಧಿ ಸೇರಿ ವಿವಿಧ ವಲಯಗಳ ಸೂಚ್ಯಂಕ ಆಧರಿಸಿ ಗುರುತಿಸಿ ಪ್ರಾದೇಶಿಕ ಅಸಮತೋಲನ ನಿವಾರಣೆಗೆ ಪರಾಮರ್ಶಿಸಿ ಸರ್ಕಾರಕ್ಕೆ ವರದಿ ನೀಡಲಾಗುವುದು ಎಂದು ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಅಧ್ಯಕ್ಷರಾದ ಪ್ರೊ.ಎಂ. ಗೋವಿಂದರಾವ್ ಅವರು ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಮಟ್ಟದ ಪ್ರಾದೇಶಿಕ ಅಸಮತೋಲನ ನಿವಾರಣೆ ಕುರಿತು ಏರ್ಪಡಿಸಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಬುಧವಾರ ಮಾತನಾಡಿದರು, ಡಾ.ಡಿ.ಎಂ.ನಂಜುಂಡಪ್ಪರವರ 2002ರ ವರದಿಯಲ್ಲಿ ಅಂದಿನ 176 ತಾಲೂಕುಗಳನ್ನು ಹಿಂದುಳಿದ, ಅತಿ ಹಿಂದುಳಿದ, ಅತ್ಯಂತ ಹಿಂದುಳಿದ ಹಾಗೂ ಅಭಿವೃದ್ಧಿ ಹೊಂದಿದ ತಾಲೂಕುಗಳೆಂದು 4 ವರ್ಗದಲ್ಲಿ ವರ್ಗೀಕರಿಸಿ ಅದಕ್ಕನುಗುಣವಾಗಿ ಅನುದಾನ ಹಂಚಿಕೆಗೆ ಶಿಫಾರಸ್ಸು ಮಾಡಿದ್ದರು. ಇದರ ಅನ್ವಯ ಗುರುತಿಸಲಾದ ಹಿಂದುಳಿದ ತಾಲೂಕುಗಳ ಅಭಿವೃದ್ಧಿಗೆ ಸರ್ಕಾರ 31 ಸಾವಿರ ಕೋಟಿ ರೂ. ವೆಚ್ಚ ಮಾಡಿದೆ. ಅಸಮತೋಲನ ಹೆಚ್ಚಾದಾಗ ಪ್ರದೇಶಗಳು ಹಿಂದುಳಿಯಲಿವೆ. ನಂಜುಂಡಪ್ಪ ವರದಿ ಅನುಷ್ಠಾನದಿಂದ ಹೇಗೆ ಅಭಿವೃದ್ಧಿಯಾಗಿದೆ ಎಂಬುದನ್ನು ಸೂಚ್ಯಂಕದ ಅಧಾರದ ಮೇಲೆ ಗುರುತಿಸಲಾಗುತ್ತದೆ. ನಿಜಕ್ಕೂ ಹಿಂದುಳಿದಿದ್ದರೇ, ಯಾವ ಕಾರಣಕ್ಕಾಗಿ ಯಾವ ಕ್ಷೇತ್ರದಲ್ಲಿ ಹಿಂದುಳಿದಿದೆ ಎಂಬುದನ್ನು ಸಮಿತಿಯು ಪರಾಮರ್ಶಿಸಲಿದೆ. ತಲಾ ಆದಾಯ, ಶಿಕ್ಷಣ, ಆರೋಗ್ಯ ಇನ್ನಿತರ ಕ್ಷೇತ್ರಗಳಲ್ಲಿನ ಸುಧಾರಣೆ, ಬೆಳವಣಿಗೆಯ ಬಗ್ಗೆಯು ಸಮಿತಿಯು ಪರಿಶೀಲಿಸಲಿದೆ. ರಾಜ್ಯ ಸರ್ಕಾರ 2024 ಸೆಪ್ಟಂಬರ್‌ನಲ್ಲಿ ಪ್ರಾದೇಶಿಕ ಅಸಮತೋಲನ ನಿವಾರಣೆಗಾಗಿ ಆರ್ಥಿಕ ತಜ್ಞರನ್ನೊಳಗೊಂಡ ಸಮಿತಿ ರಚಿಸಿದ್ದು, ಈ ಸಮಿತಿಯು ಕೃಷಿ, ಕೈಗಾರಿಕೆ, ಆರ್ಥಿಕ ಮೂಲ ಸೌಲಭ್ಯ, ಸಾಮಾಜಿಕ ಸೌಲಭ್ಯ, ಹಣಕಾಸಿನ ಮತ್ತು ತಾಂತ್ರಿಕ ಮೂಲಸೌಲಭ್ಯ ಮುಂತಾದ ವಲಯಗಳ ಅಭಿವೃದ್ಧಿಯನ್ನು ಗುರುತಿಸಿ ಸೂಚ್ಯಂಕ ನಿಗಧಿಪಡಿಸಲಿದೆ. ಬಳಿಕ ಸಮಿತಿಯು ಸರ್ಕಾರಕ್ಕೆ ವರದಿ ಸಲ್ಲಿಸುತ್ತದೆ. ಜಿಲ್ಲೆಯಲ್ಲಿ ಕೈಗಾರಿಕಾ ಅಭಿವೃದ್ಧಿ ಬಹಳ ಮುಖ್ಯವಾಗಿದೆ. ಇಲ್ಲಿನ ಯುವಕರಿಗೆ ಉದ್ಯೋಗ ದೊರೆಯುವಂತೆ ಮಾಡುವುದು ಹಾಗೂ ವಲಸೆ ಹೋಗುವುದನ್ನು ಕಡಿಮೆ ಮಾಡುವುದು ಬಹಳ ಮುಖ್ಯವಾಗಿದೆ ಹಾಗೂ ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಗಾಗಿ ಹಲವಾರು ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಾಗಿದೆ ಎಂದು ತಿಳಿಸಿದರು.

ಕೂಡ್ಲಿಗಿ ಶಾಸಕ ಡಾ.ಎನ್.ಟಿ.ಶ್ರೀನಿವಾಸ್ ಮಾತನಾಡಿ, ಕೂಡ್ಲಿಗಿ ಕ್ಷೇತ್ರದಲ್ಲಿ ಹಿಂದುಳಿದವರು, ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದವರು ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಶಾಲೆಗಳಲ್ಲಿ ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಅಗತ್ಯ ನುರಿತ ಶಿಕ್ಷಕರ ನೇಮಕವಾಗಬೇಕಿದೆ. ಯುವಕ, ಯುವತಿಯರಿಗೆ ಕೌಶಲ್ಯ ಅಭಿವೃದ್ಧಿ ತರಬೇತಿಗಳು ಹೆಚ್ಚಿಸುವ ಮೂಲಕ ಸ್ಥಳೀಯರಿಗೆ ಉದ್ಯೋಗಾವಕಾಶಗಳನ್ನು ನೀಡಬೇಕಿದೆ. ಪ್ರವಾಸಿ ತಾಣ, ಧಾರ್ಮಿಕ ಕ್ಷೇತ್ರಗಳು, >>4



# ಬಾಲ ಪುರಸ್ಕಾರ ಪ್ರಶಸ್ತಿಗೆ ಆನ್ಲೈನ್ ಅರ್ಜಿ ಅಹ್ವಾನ

**ಹಂಪಿ ಟೈಮ್ಸ್ ಹೊಸಪೇಟೆ:**

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಮಂತ್ರಾಲಯದಿಂದ 2025 ನೇ ಸಾಲಿನ ರಾಷ್ಟ್ರೀಯ ಪ್ರಧಾನ ಮಂತ್ರಿ ಬಾಲ ಪುರಸ್ಕಾರ ಪ್ರಶಸ್ತಿಗಾಗಿ ಅರ್ಜಿ ಅಹ್ವಾನಿಸಲಾಗಿದೆ.

ವಿಜಯನಗರ ಜಿಲ್ಲೆಯಲ್ಲಿ ಧೈರ್ಯ ಮತ್ತು ಸಾಹಸದಿಂದ ಇತರರನ್ನು ರಕ್ಷಿಸಿದ ಹಾಗೂ ಕ್ರೀಡೆ, ಸಮಾಜಸೇವೆ, ತಂತ್ರಜ್ಞಾನ, ಕಲೆ, ಸಂಸ್ಕೃತಿ, ಪರಿಸರ ಸಂರಕ್ಷಣೆ ಮತ್ತು ನೂತನ ಆವಿಷ್ಕಾರಗಳನ್ನು ಮಾಡಿ ಉತ್ತಮ ಸಾಹಸ ಮಾಡಿದಂತಹ 5 ವರ್ಷ ಮೇಲ್ಪಟ್ಟ 18 ವರ್ಷದೊಳಗಿನ ಮಕ್ಕಳು ಜುಲೈ 31 ರೊಳಗಾಗಿ ಆನ್‌ಲೈನ್ ವೆಬ್‌ಸೈಟ್ https://awards.gov.in ನಲ್ಲಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ನ್ಯಾಷನಲ್ ಅವಾರ್ಡ್ ಪೋರ್ಟಲ್ ಅನ್ನು ಭೇಟಿ ನೀಡಬಹುದು ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧ್ಯಕ್ಷರು, ಜಿಲ್ಲಾಧಿಕಾರಿಗಳಾದ ಎಂ.ಎಸ್.ದಿವಾಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


ಹಂಪಿ ಟೈಮ್ಸ್
ವಿಜಯನಗರದ ಹೆಮ್ಮೆ
ಕನ್ನಡ ದಿನ ಪತ್ರಿಕೆ

Searching for the perfect platform to promote your brand?
Want to reach more people?
Choose HAMPI TIMES


Scan to read epaper



HAMPI TIMES
Kannada Daily News paper
Print & Digital Edition
Contact : 94486 33038
E-mail: hampitimes@gmail.com
www.hampitimes.com


## ಆನಂದ ಬಾಣ

ಕಾಲ ಮತ್ತು ಶಾಲಾ ಚೀಲ




## ಮೈಕ್ರೋ ನ್ಯೂಸ್

### ಜೂ.25 ಅಂಚೆ ಇಲಾಖೆ ಪಿಂಚಣಿ ಅದಾಲತ್

**ಹಂಪಿ ಟೈಮ್ಸ್ ಹೊಸಪೇಟೆ**

ಅಂಚೆ ಇಲಾಖೆಯಿಂದ ನಿವೃತ್ತರಾದ ಸರ್ಕಾರದಿಂದ ಪಿಂಚಣಿ ಪಡೆಯುತ್ತಿರುವ ಇಲಾಖೆ ನೌಕರಿಕರಿಗಾಗಿ ಮತ್ತು ಕುಟುಂಬ ಪಿಂಚಣಿ ಪಡೆಯುತ್ತಿರುವ ನಿವೃತ್ತ ಅಂಚೆ ನೌಕರರ ಕುಟುಂಬದವರಿಗಾಗಿ ಜೂನ್ 25 ರಂದು ಬುಧವಾರ, ಸಂಜೆ 4:00 ಗಂಟೆಗೆ ಬಳ್ಳಾರಿ ವಿಭಾಗೀಯ ಕಚೇರಿಯಲ್ಲಿ ಪಿಂಚಣಿ ಅದಾಲತ್ ನ್ನು ಆಯೋಜಿಸಲಾಗಿದೆ.

ಪಿಂಚಣಿದಾರರು ತಮ್ಮ ಕುಂದು ಕೊರತೆಗಳು ಇದ್ದಲ್ಲಿ ಅಂಚೆ ಅಧೀಕ್ಷಕರು, ಬಳ್ಳಾರಿ ವಿಭಾಗ, ವಿಭಾಗೀಯ ಕಾರ್ಯಾಲಯ ಕೋಟೆ ಬಳ್ಳಾರಿ ಅವರಿಗೆ ಜೂನ್.23 ರ ಮುಂಚಿತವಾಗಿ ತಲುಪುವಂತೆ ಪತ್ರ ಮುಖೇನ ಅಥವಾ doballari.ka@indiapost.gov.in ಗೆ ಇಮೇಲ್ ಮೂಲಕ ಕಳುಹಿಸಿಕೊಡಬೇಕು. ತಮ್ಮ ಅಹವಾಲುನೊಂದಿಗೆ ಪಿಂಚಣಿ ಅದಾಲತ್ ನಲ್ಲಿ ಹಾಜರಾಗಬೇಕು ಎಂದು ಬಳ್ಳಾರಿ ವಿಭಾಗದ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಇಂದು ಸ್ವಯಂಪ್ರೇರಿತ ರಕ್ತದಾನ ಶಿಬಿರ

**ಹಂಪಿ ಟೈಮ್ಸ್ ಹಗರಿಬೊಮ್ಮನಹಳ್ಳಿ**

ಪಟ್ಟಣದ ಗುರುಭವನದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ, ಸಾರ್ವಜನಿಕ ಆಸ್ಪತ್ರೆ ಹಗರಿಬೊಮ್ಮನಹಳ್ಳಿ ಹಾಗೂ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಘಟಕದ ಸಹಭಾಗಿತ್ವದಲ್ಲಿ ಸ್ವಯಂಪ್ರೇರಿತ ರಕ್ತದಾನ ಶಿಬಿರ ಹಮ್ಮಿಕೊಳ್ಳಾಲಿಗಿದೆ ಎಂದು ತಾಲೂಕು ವೈದ್ಯಾಧಿಕಾರಿ ಡಾ.ಪ್ರವೀಣ್ ತಿಳಿಸಿದರು.

ಪತ್ರಿಕೆಯೊಂದಿಗೆ ಮಾತನಾಡಿದ ಅವರು, ರಕ್ತದಾನದಿಂದ ಮತ್ತೊಬ್ಬ ವ್ಯಕ್ತಿಯ ಜೀವವನ್ನು ಉಳಿಸುವುದಲ್ಲದೇ, ನಮ್ಮ ಆರೋಗ್ಯದ ದೃಷ್ಟಿಯಿಂದಲೂ ಒಳ್ಳೆಯದು. ರಕ್ತದಾನದ ಬಗ್ಗೆ ಜಾಗೃತಿ ಮೂಡಿಸುವುದು ಹಾಗೂ ಸ್ವಯಂಪ್ರೇರಿತ ರಕ್ತದಾನದ ಬಗ್ಗೆ ಸಾರ್ವಜನಿಕವಾಗಿ ಅರಿವು ಮೂಡಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ರಕ್ತದಾನ ಶಿಬಿರವು ಬೆಳಗ್ಗೆ 9ರಿಂದ ಸಂಜೆ 5ರವರೆಗೆ ನಡೆಯಲಿದ್ದು ತಾಲೂಕಿನ ಯುವ ಸಮೂಹ ಸೇರಿದಂತೆ ಎಲ್ಲಾ ಸಂಘ–ಸಂಸ್ಥೆಯ ಪದಾಧಿಕಾರಿಗಳು, ಮುಖಂಡರು ಹಾಗೂ ಸಾರ್ವಜನಿಕರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸ ಬೇಕು ಎಂದರು.


ಹಂಪಿ ಟೈಮ್ಸ್
ವಿಜಯನಗರದ ಹೆಮ್ಮೆ
ಕನ್ನಡ ದಿನ ಪತ್ರಿಕೆ

Follow for vijayanagara dist. updates

# 532 ಪೌರ ಕಾರ್ಮಿಕರ ಹುದ್ದೆ ಕಾಯಂ: ಸಿ.ಎಂ

## ಖಾಲಿ ಇರುವ 35000 ಸಾವಿರ ನಿಮ್ಮ ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿ



■ **ಹಂಪಿ ಟೈಮ್ಸ್ ಬೆಂಗಳೂರು**

ವಿದ್ಯುತ್ ಪ್ರಸರಣ ಇಲಾಖೆಯಲ್ಲಿ ಖಾಲಿ ಇರುವ 35000 ಸಾವಿರ ನಿಮ್ಮ ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿ ಮಾಡಲಾಗುವುದು. ಇಲಾಖೆಯ 532 ಮಂದಿ ಪೌರ ಕಾರ್ಮಿಕರ ಹುದ್ದೆ ಕಾಯಂ ಮಾಡುತ್ತೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಘೋಷಿಸಿದರು.

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದ ನೌಕರರ ಸಂಘದ ವಜ್ರ ಮಹೋತ್ಸವವನ್ನು ಉದ್ಘಾಟಿಸಿ, ವಜ್ರಜ್ಯೋತಿ ಸ್ಮರಣ ಸಂಚಿಕೆ ಲೋಕಾರ್ಪಣೆ ಮಾಡಿ ಮಾತನಾಡಿದರು. ನಮ್ಮದು ನುಡಿದಂತೆ ನಡೆಯುವ ಸರ್ಕಾರ. ನಿಮ್ಮ ಬೇಡಿಕೆಗಳ ಪರಿಶೀಲಿಸಿ ಕ್ರಮ ತೆಗೆದುಕೊಳ್ಳುತ್ತೇವೆ. ಓಕಖ ಜಾರಿ ಮಾಡಿದ್ದು ಕೇಂದ್ರ ಸರ್ಕಾರ. ನಾವು OPS ಜಾರಿಯನ್ನು ಪ್ರಣಾಳಿಕೆಯಲ್ಲೇ ಘೋಷಿಸಿದ್ದೇವೆ. ಈ ಬಗ್ಗೆ ಚರ್ಚಿಸಿ ಅಗತ್ಯ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ಇದೇ ಸಂದರ್ಭದಲ್ಲಿ ಘೋಷಿಸಿದರು.

> NPS ಜಾರಿ ಮಾಡಿದ್ದು ಕೇಂದ್ರ ಸರ್ಕಾರ. ನಾವು OPS ಜಾರಿಯನ್ನು ಪ್ರಣಾಳಿಕೆಯಲ್ಲೇ ಘೋಷಿಸಿದ್ದೇವೆ: ಸಿ.ಎಂ

1964 ರಲ್ಲಿ ಆರಂಭವಾದ ನೌಕರರ ಸಂಘ ಇಷ್ಟು ಮಹತ್ತರ ವರ್ಷಗಳ ಕಾಲ ನಿರಂತರವಾಗಿ ನೌಕರರ ಕಷ್ಟ ಸುಖಗಳಿಗೆ ಸ್ಪಂದಿಸಿ, ಪ್ರಾಮಾಣಿಕ ಹೋರಾಟ ನಡೆಸುತ್ತಿದೆ. ಜೊತೆಗೆ ಗ್ರಾಹಕರಿಗೆ ಸಮರ್ಪಕ ವಿದ್ಯುತ್ ಪೂರೈಸುವ ಹೊಣೆಗಾರಿಕೆಯನ್ನು ಅಚ್ಚುಕಟ್ಟಾಗಿ ನಿರ್ವಹಿಸಿದ್ದೀರಿ. ಇದಕ್ಕೆ ನೀವೆಲ್ಲರೂ ಅಭಿನಂದನಾರ್ಹರು ಎಂದು ಶ್ಲಾಘಿಸಿದರು.

ಇಡೀ ಏಷ್ಯಾದಲ್ಲಿ ಮೊದಲಿಗೆ ವಿದ್ಯುತ್ ಉತ್ಪಾದನೆ ಆಗಿದ್ದು 1902 ರಲ್ಲಿ ಕರ್ನಾಟಕದಲ್ಲಿ. 1905 ರಲ್ಲಿ ಬೆಂಗಳೂರಿನಲ್ಲಿ ಪ್ರಥಮ ವಿದ್ಯುತ್ ಸರಬರಾಜು ಕಂಪನಿ ಆರಂಭಿಸಲಾಯಿತು. 1908 ರಲ್ಲಿ ಮೊದಲ ಬಾರಿ ಅರಮನೆಗೆ ವಿದ್ಯುತ್ ಬಂತು. ಅಲ್ಲಿಂದ ಇಲ್ಲೀವರೆಗೆ ರಾಜ್ಯದಲ್ಲಿ ವಿದ್ಯುತ್ ಉತ್ಪಾದನೆಯಲ್ಲಿ ನಾವು 34000 ಮೆಘಾ ವ್ಯಾಟ್ ಉತ್ಪಾದನೆ ಮಾಡುತ್ತಿರುವ ರಾಜ್ಯ ಎನ್ನುವ ಹೆಗ್ಗಳಿಕೆ ಕೇವಲ ನಮ್ಮ ರಾಜ್ಯದ್ದಾಗಿದೆ ಎಂದರು.

ಆಹಾರ ಉತ್ಪಾದನೆಯಲ್ಲಿ ನಾವು ಸ್ವಾವಲಂಬಿಗಳಾಗುತ್ತಿರುವುದು ವಿದ್ಯುತ್ ಉತ್ಪಾದನೆಯಲ್ಲಿ ಸ್ವಾವಲಂಬಿಗಳಾಗಿರುವ ಕಾರಣಕ್ಕೇ ಎಂದು ವಿಶ್ಲೇಷಿಸಿದರು.

ರೈತರಿಗೆ, ಕೃಷಿಗೆ, ಪಂಪ್ ಸೆಟ್ ಗಳಿಗೆ ಹಗಲಲ್ಲೂ 7 ಗಂಟೆ ಅಗತ್ಯ ವಿದ್ಯುತ್ ಸರಬರಾಜು ಮಾಡಲು ಶಕ್ತರಾಗುತ್ತೇವೆ. ಈ ಗುರಿ ಇಟ್ಟುಕೊಂಡು ಕೆಲಸಗಳು ನಡೆಯುತ್ತಿವೆ. 60000 ಮೆಘಾ ವ್ಯಾಟ್ ಉತ್ಪಾದನೆ ಗುರಿ ನಾವು ತಲುಪಿದ ತಕ್ಷಣ ಇದು ಸಾಧ್ಯವಗಲಿದೆ. ವಿದ್ಯುತ್ ಪ್ರಮುಖ ಕಚ್ಚಾವಸ್ತು ಎನ್ನುವುದನ್ನು ನಾವು ಮರೆಯಬಾರದು ಎಂದರು.

ನೌಕರರು ಮತ್ತು ಕಾರ್ಮಿಕರು ಬಹಳ ಶ್ರಮ ವಹಿಸಿ ಕೆಲಸ ನಿರ್ವಹಿಸುತ್ತಿದ್ದೀರಿ. ನಿಮ್ಮ ಎಲ್ಲಾ ಬೇಡಿಕೆಗಳನ್ನೂ ಈಡೇರಿಸಲು ನಮ್ಮ ಸರ್ಕಾರ ಸಿದ್ಧವಿದೆ. ನಾವು ನಿಮ್ಮ ಜೊತೆಗೆ ಇದ್ದೇವೆ. ನೀವು ನಮ್ಮ ಜೊತೆಗೆ ಇರಿ ಎಂದು ಕರೆ ನೀಡಿದರು.

# ಮಾತು ಮನ ಅರಳಿಸುವಂತಿರಲಿ

ಮಾನವ ಸಮಾಜಜೀವಿ. ಸಮಾಜವನ್ನು ಬಿಟ್ಟು ಅವನು ಬದುಕಲಾರ. ಅವನು ತನ್ನಜೀವಿತಾವಧಿಯಲ್ಲಿ ಅನೇಕ ಬಗೆಯ ಸುಖ-ದುಃಖ, ನೋವು-ನಲಿವು, ಆಸೆ-ನಿರಾಸೆ ಮೊದಲಾದವನ್ನು ಅನುಭವಿಸುತ್ತಿರುತ್ತಾನೆ. ಇಂತಹ ವಿಪುಲವಾದ ಭಾವನೆಗಳನ್ನು ತನ್ನಲ್ಲಿಯೇ ಹುದುಗಿಸಿಟ್ಟುಕೊಳ್ಳಲು ಆಗುವುದಿಲ್ಲ. ಅವನ್ನುಇತರರೊಂದಿಗೆ ಬೇರೆ ಬೇರೆರೀತಿಯಲ್ಲಿ ಹಂಚಿಕೊಳ್ಳುತ್ತಾನೆ. ತನ್ನ ಭಾವಾಭಿವ್ಯಕ್ತಿಗೆದೃಶ್ಯ, ಶಬ್ದ ಮೊದಲಾದ ಸಂಕೇತಗಳನ್ನು ಬಳಸುತ್ತಾನೆ. ಇವುಗಳಲ್ಲಿ 'ಮಾತು' ಅತ್ಯಂತ ಪ್ರಧಾನ ಸಾಧನವಾಗಿದೆ. ಮನುಷ್ಯತನ್ನ ಮನಸ್ಸಿನ ಆಲೋಚನೆ, ಭಾವ, ಭಾವನೆಗಳನ್ನು ಧ್ವನಿಸಂಕೇತಗಳ ಮೂಲಕ ವ್ಯಕ್ತಗೊಳಿಸುವ ಮಾಧ್ಯಮವನ್ನೇ 'ಭಾಷೆ' ಎಂದುಕರೆಯುತ್ತೇವೆ. ಇದಕ್ಕೆ ನುಡಿ, ಸೊಲ್ಲು, ಸಂಭಾಷಣೆ, ಆಣೆ, ಪ್ರತಿಜ್ಞೆ, ನಿಶ್ಚಯ, ಅಪವಾದ, ದೂರು, ನಿಂದೆ, ಜಗಳ, ವಾಗ್ವಾದಎಂದುಅನೇಕ ಅರ್ಥಗಳಿವೆ. ಜನಬಳಕೆಯಲ್ಲಿ, ಕನ್ನಡ ವಾಙ್ಮಯದಲ್ಲಿಒಮ್ಮೆ ವಿಹರಿಸಿದಾಗ ಮಾತಿನಅರ್ಥವ್ಯಾಪ್ತಿ ಎಷ್ಟು ಹಿರಿದಾದುದುಎಂಬುದನ್ನು ಮನಗಾಣಬಹುದು.

'ಮಾತು ಬೆಳ್ಳಿ, ಮೌನ ಬಂಗಾರ', 'ಮಾತೇ ಮಾಣಿಕ್ಯ' 'ಮಾತು ಮನೆ ಕೆಡಿಸಿತು, ತೂತು ಒಲೆ ಕೆಡಿಸಿತು' 'ಸೂಕ್ಷ್ಮಮತಿಗೆ ಮಾತಿನ ಪೆಟ್ಟು, ಜಡಮತಿಗೆದೊಣ್ಣೆಯ ಪೆಟ್ಟು' ಎಂಬ ಗಾದೆಮಾತು, ನುಡಿಗಟ್ಟುಗಳಲ್ಲಿ ಮಾತಿನ ಮಹತ್ವಎಂಥದ್ದುಎಂಬುದು ತಿಳಿದು ಬರುತ್ತದೆ. "ಕೊಟ್ಟ ಮಾತಿಗೆತಪ್ಪಲಾರೆನು, ಕೆಟ್ಟಯೋಚನೆ ಮಾಡಲಾರೆನು..." ಎಂದು ಹೇಳುವ ಗೋವಿನ ಹಾಡಿನಲ್ಲಿ'ಮಾತು' ಎಂಬ ಶಬ್ದಕ್ಕೆ ಆಣೆ, ಪ್ರತಿಜ್ಞೆ ಎಂಬ ಅರ್ಥವಿರುವುದನ್ನು ಗಮನಿಸಬಹುದು. 'ಮಾತುಆಡಿದರೆ ಹೋಯ್ತು, ಮುತ್ತುಒಡೆದರೆ ಹೋಯ್ತು' ಎಂಬ ನಾಣ್ಣುಡಿಯಲ್ಲಿ ಮಾತನ್ನು ಎಷ್ಟು ತುಂಬ ಎಚ್ಚರಿಕೆಯಿಂದ ಬಳಸಬೇಕು ಎಂಬುದು ವ್ಯಕ್ತವಾಗುತ್ತದೆ. ಮಾತನ್ನುಜಾಣ್ಮೆಯಿಂದ ಬಳಸಿದರೆ ಎಂಥಅಸಾಧ್ಯವಾದುದನ್ನೂ ಸಾಧ್ಯವಾಗಿಸಬಹುದು.ಎಚ್ಚರದಪ್ಪಿದರೆಏನೆಲ್ಲಾಅನಾಹುತವಾಗಬಹುದು!ಆದ್ದರಿಂದಲೇ 'ಮಾತು ಬಲ್ಲವನಿಗೆ ಜಗಳವಿಲ್ಲ, ಊಟ ಬಲ್ಲವನಿಗೆರೋಗವಿಲ್ಲ' ಎಂಬ ಗಾದೆಮಾತು ಬಂದಿದೆ.

ಮಾತು ಕೇವಲ ಶಬ್ದಗಳ ಚಮತ್ಕಾರವಲ್ಲ, ಮನಸ್ಸು-ಮನಸ್ಸುಗಳನ್ನು ಅರ್ಥಮಾಡಿಕೊಳ್ಳುವ, ಬೆಸೆಯುವ ಮುಖ್ಯ ಸಾಧನ. ಅದು ಬೆಳಕಿದ್ದಂತೆ.ಇದನ್ನೇ ವಚನಕಾರರಾದಅಲ್ಲಮಪ್ರಭು "ಮಾತೆಂಬುದುಜ್ಯೋತಿರ್ಲಿಂಗ" ಎಂದು ಸೊಗಸಾಗಿ, ಅರ್ಥಪೂರ್ಣವಾಗಿ ನುಡಿದಿದ್ದಾರೆ.ಯಾವ ಸಮಯದಲ್ಲಿಎಂಥ ಮಾತುಗಳನ್ನು ಆಡಬೇಕು,ಎಂಥ ಮಾತುಗಳನ್ನು ಆಡಬಾರದು ಎಂಬುದನ್ನು ನಾವು ಸರಿಯಾಗಿಆಲೋಚಿಸಬೇಕು.ಏಕೆಂದರೆ ಒಳ್ಳೆಯ ಮಾತು ಹೇಗೆ ಮನಸ್ಸುಗಳನ್ನು ಬೆಸೆಯ ಬಲ್ಲದೋ ಅಂತೆಯೇ ಒಂದು ಕೆಟ್ಟಮಾತು ಒಂದಾದ ಮನಸ್ಸು, ಕುಟುಂಬಗಳನ್ನು ಛಿದ್ರಗೊಳಿಸಿ, ಒಡೆಯಬಲ್ಲದು, ಮಾತು ನಮ್ಮ ಸಂಸ್ಕೃತಿ-ಸಂಸ್ಕಾರಗಳ ಕನ್ನಡಿಯಾಗಿದೆ ಎಂದರೆ ಅತಿಶಯೋಕ್ತಿಯಲ್ಲ. ಪಂಪ ಭಾರತದಲ್ಲಿ ಬರುವ "ನಾಲಗೆ ಕುಲಮಂ ತುಬ್ಬುವವೊಲ್ ನೀಂ ಕೆಡೆನುಡಿವೈಕರ್ಣಾ.." ಎಂಬ ದ್ರೋಣರ ಮೂಲಕ ಪಂಪನಾಡಿಸುವ ಮಾತು ಅತ್ಯಂತ ತೀಕ್ಷ್ಣವಾದುದು. "ನುಡಿದರೆ ಮುತ್ತಿನ ಹಾರದಂತಿರಬೇಕು, ನುಡಿದರೆ ಮಾಣಿಕ್ಯದ ದೀಪ್ತಿಯಂತಿರಬೇಕು, ನುಡಿದರೆ ಸ್ಫಟಿಕದ ಶಲಾಕೆ ಯಂತಿರಬೇಕು... ನುಡಿದರೆ ಲಿಂಗಮೆಚ್ಚಿಅಹುದ ಹುದೆನಬೇಕು..." "ಅಯ್ಯಾ ಎಂದರೆ ಸ್ವರ್ಗ, ಎಲವೋ ಎಂದರೆ ನರಕ.." ಎಂಬ ಬಸವಣ್ಣನವರ ವಚನದ ಸಾಲುಗಳು ಹೇಳುವುದು ಮಾತು ಇರಬೇಕಾದ ರೀತಿಯನ್ನೇ. ಬಸವಣ್ಣವನವರದೇ ಇನ್ನೊಂದು ವಚನದಲ್ಲಿ "ಕಳಬೇಡ, ಕೊಲಬೇಡ, ಹುಸಿಯ ನುಡಿಯಲು ಬೇಡ... ಎಂಬ ಮಾತುಗಳು ಬರುತ್ತವೆ. ಸುಳ್ಳನ್ನು ಹೇಳಬಾರದು, ಸತ್ಯವನ್ನು ಹೇಳಬೇಕು, ಎಂಥ ಸತ್ಯವನ್ನು? "ಸತ್ಯಂ ಬ್ರೂಯಾತ್, ಪ್ರಿಯಂ ಬ್ರೂಯತ್, ಸತ್ಯಮಪ್ರಿಯಂ ನ ಬ್ರೂಯತ್" ಎನ್ನುತ್ತದೆ ಸಂಸ್ಕೃತೋಕ್ತಿ. ಎಂದರೆ ಸತ್ಯವನ್ನು ಹೇಳಬೇಕು, ಎಂದರೆ ಸಂವಹನದಲ್ಲಿ ಪ್ರಾಮಾಣಿಕತೆ ಮತ್ತು ಸಮಗ್ರತೆಯಿರಬೇಕು.ಇಷ್ಟವಾಗುವಂಥದ್ದನ್ನು ಹೇಳಬೇಕು, ಎಂದರೆ ಪ್ರಸನ್ನತೆ, ಕರುಣೆ ಮತ್ತು ಇತರರ ಭಾವಗಳನ್ನು ಲಕ್ಷ್ಯದಲ್ಲಿಡಬೇಕು; ಸತ್ಯವಾದರೂ ಅಪ್ರಿಯವಾದುದನ್ನು, ಅಮಂಗಳಕರವಾದುದನ್ನು ನುಡಿಯಬಾರದು, ಎಂದರೆ ನಮಗೆ ಸತ್ಯವೆನಿಸಿದರೂ ಇತರರಿಗೆ ನೋವಾಗುವಂತಹ ಸಂಗತಿಗಳನ್ನು ಹೇಳಬಾರದು. ಆದ್ದರಿಂದಲೇ ಎಷ್ಟೋ ಸಲ ಸಾವಿನ ಸಂಗತಿಯನ್ನು ನೇರವಾಗಿ ಹೇಳುವುದಿಲ್ಲ.



ಡಾ.ಬಿ.ಜಿ.ಕನಕೇಶಮೂರ್ತಿ
ಬೆಂಗಳೂರು

Scan For Digital Colourful
HAMPI TIMES E-paper



ಒಳಗೊಂದು ಹೊರಗೊಂದುತರವಲ್ಲ, ಮುಖವಾಡದ ನಗೆ ನಗೆಯಲ್ಲ, ಇದನ್ನೇ "ಎರ್ದೆಕತ್ತರಿ ನಾಲಗೆ ಬೆಲ್ಲಂ" ಎಂಬ ಕವಿಸೂಕ್ತಿ ಧ್ವನಿಸುತ್ತದೆ. ಕಮಲದಂಥ ಸುಂದರವಾದ ಮುಖವಿದ್ದು, ಮಾತು ಶ್ರೀಗಂಧದಂತೆ ಪರಿಮಳಯುಕ್ತವಾಗಿದ್ದರೂ ಹೃದಯಕತ್ತರಿಯಂತೆ ಇದ್ದರೆ ಏನು ಪ್ರಯೋಜನ? ಇದು ಧೂರ್ತನ ಲಕ್ಷಣ ಎನ್ನುತ್ತದೆ ಸುಭಾಷಿತವೊಂದು.ಆದ್ದರಿಂದ ಅಧರಕ್ಕೆ ಕಹಿಯೆನಿಸಿದರೂ ಉದರಕ್ಕೆ ಸಿಹಿಯಾಗುವ ಔಷಧದಂತೆ ಮಾತು ಪ್ರಯೋಜನಕಾರಿಯಾಗಿರಬೇಕಾದುದು ಮುಖ್ಯ.

ನಿಸರ್ಗ ವ್ಯಾಪಾರದ ಎದುರು ಮನುಷ್ಯನ ಮಾತು ಎಷ್ಟು ವ್ಯರ್ಥ, ನಿಷ್ಪ್ರಯೋಜಕ ಎಂಬುದನ್ನು ಡಿ.ವಿ.ಜಿ.ಯವರ "ಇಳೆಯಿಂದ ಮೊಳಕೆಯೊಗೆವಂದು ತಮಟೆಗಳಿಲ್ಲ, ಫಲಮಾಗುವಂದು ತುತ್ತೂರಿ ದನಿಯಿಲ್ಲ, ಬೆಳಕೀವ ಸೂರ್ಯಚಂದ್ರರದೊಂದು ಸದ್ದಿಲ್ಲ, ಹೊಲಿ ನಿನ್ನ ತುಟಿಗಳನು ಮಂಕುತಿಮ್ಮ" ಎಂದು ಅರ್ಥಪೂರ್ಣವಾಗಿ ವಿವರಿಸುತ್ತವೆ. ಮಾತಿನ ಸೊಗಸು, ಲಾಲಿತ್ಯ ಹಾಗೆಯೇ ಅ ಸೌಂದರ್ಯ ಹೇಗಿರುತ್ತದೆಂದರೆ: ಸರ್ವಜ್ಞಕವಿ ಹೇಳುವಂತೆ: "ರಸಿಕರಾಡುವ ಮಾತು ಶಶಿಯುದಿಸಿ ಬಂದಂತೆ, ರಸಿಕರಲ್ಲದವರ ಬಿರುನುಡಿಯು ಕಿವಿಯೊಳಗೆ ಕೂರ್ದಸಿಯ ಬಡಿದಂತೆ". ಎಲ್ಲವೂ ನಾವಾಡುವ ಮಾತನ್ನೇ ಅವಲಂಬಿಸಿರುತ್ತದೆ.

ಬೇಂದ್ರೆಯವರು ಹೇಳುವಂತೆ "ಮಾತು ಮಾತು ಮಥಿಸಿ ಬಂದನಾದದ ನವನೀತ"ದಂತೆ ನಮ್ಮ ಮಾತು ಇತರರಿಗೆ ಸಂತಸವನ್ನುಂಟುಮಾಡುವಂತೆ ಇರಬೇಕು. ಸರ್ವಜ್ಞಕವಿ ಇನ್ನೊಂದುಕಡೆ: "ಮಾತಿಂದೆ ನಗೆನುಡಿಯು, ಮಾತಿಂದೆ ಕೊಲೆ ಹಗೆಯು, ಮಾತಿಂದೆ ಸರ್ವರಿಗೆಯುಪಚಾರ; ಲೋಕಕ್ಕೆ ಮಾತೆ ಮಾಣಿಕವು" ಎನ್ನುತ್ತಾನೆ.

ಕವಿಚೆನ್ನವೀರ ಕಣವಿಯವರು "ಮಾತು" ಎಂಬ ಕವಿತೆಯಲ್ಲಿ ತುಂಬ ಸುಂದರವಾಗಿ, ತುಂಬ ಅರ್ಥಪೂರ್ಣವಾಗಿ ಮಾತಿನ ಬಗ್ಗೆ ಹೇಳುತ್ತಾರೆ. "ಮುಂಜಾವದಲಿ ಹಸಿರು ಹುಲ್ಲು ಮಕಮಲ್ಲಿನಲಿ ಪಾರಿಜಾತವು ಹೂವು ಸುರಿಸಿದಂತೆ; ಮೆಲ್ಲೆದೆಯ ಸವಿಯೊಲುಮೆಕರಗಿ ಕಂಬನಿಯಾಗಿ ಹೆಣ್ಣ ಕಣ್ಣಂಚಿನಲಿ ತುಳುಕುವಂತೆ; ಮುಟ್ಟಿದರೆ ಮಾಸುತಿಹ ಮಂಜುಹನಿ ಮುತ್ತಿನಲಿ ಸೃಷ್ಟಿ ಸಂಪೂರ್ಣತೆಯ ಬಿಂಬಿಪಂತೆ; ನಾವು ಆಡುವ ಮಾತು ಹೀಗಿರಲಿ ಗೆಳೆಯ, ಮೃದುವಚನ ಮೂಲೋಕ ಗೆಲ್ಲುವುದು ತಿಳಿಯ; ಮೌನಮೊಗ್ಗೆಯನೊಡೆದು ಮಾತರಳಿ ಬರಲಿ; ಮೂರುಗಳಿಗೆಯ ಬಾಳು ಮಗಮಗಿಸುತಿರಲಿ."

ನಾವು ಬಳಸುವ ಮಾತು ಪರರಿಗೆ, ನೆರೆ-ಹೊರೆಯವರಿಗೆ ಆನಂದಕರವಾಗುವಂತೆ ಬಳಕೆಯಾದರೆ ಮನುಷ್ಯ-ಮನುಷ್ಯ ಸಂಬಂಧಗಳು ತಾವಾಗಿಯೇ ಸ್ನೇಹಮಯವಾಗಿರುತ್ತವೆ; ಶಾಂತಿ-ನೆಮ್ಮದಿಗಳು ಮನೆಮಾಡುತ್ತವೆ.

## ನೀವೂ ಬರೆಯಬಹುದು

ಹಂಪಿ ಟೈಮ್ಸ್ ಪತ್ರಿಕೆ ಆರಂಭಿಸಿದ್ದು ನಾವಾದರೂ, ಕೈಹಿಡಿದು ನಡೆಸುವವರು ನೀವು. ನಮ್ಮ ಇಚ್ಛೆಯೂ ಒಳಗೊಂಡಂತೆ ನಿಮ್ಮ ಆಶಯಗಳಿಗೆ ತಕ್ಕಂತೆ ಪತ್ರಿಕೆಯನ್ನು ರೂಪಿಸುವ ಹೊಣೆಗಾರಿಕೆ, ಜವಾಬ್ದಾರಿಯೂ ನಮ್ಮದಾಗಿದೆ. ಇಲ್ಲಿ ಕೇವಲ ನಮ್ಮ ಬರವಣಿಗೆ ಅಷ್ಟೇ ಅಲ್ಲದೇ, ಬರಹಗಾರರಾಗಿದ್ದರೆ ನೀವೂ ಕೂಡ ನಿಮ್ಮ ಬರಹವನ್ನಿಲ್ಲಿ ಓದಬಹುದು. ಈ ನಿಟ್ಟಿನಲ್ಲಿ ನಿಮ್ಮಿಂದ ಕತೆ, ಕವನ, ವಿವಿಧ ಪ್ರಕಾರದ ಸಾಹಿತ್ಯ ಹಾಗೂ ಮಹಿಳಾ ಮತ್ತು ಮಕ್ಕಳ ಪರ ಚಿಂತನೆ ಒಳಗೊಂಡ ಲೇಖನಗಳನ್ನು ನಾವು ನಿರೀಕ್ಷಿಸುತ್ತಿದ್ದೇವೆ. ಜೊತೆಗೆ ಬಹುಮುಖ್ಯವಾಗಿ ಈ ನೆಲದ ಜನರ ಧ್ವನಿಯಾಗುವ ಹಂಬಲದಿಂದ ಸಾರ್ವಜನಿಕ ಕುಂದು ಕೊರತೆಗಳನ್ನು ಹೇಳಿಕೊಳ್ಳಬಹುದು. ಓದುಗ ಪ್ರಭುಗಳಾದ ನೀವು ಪತ್ರಿಕೆಯ ಭಾಗವೂ ಹೌದು. ಹೀಗಾಗಿ ನಿಮ್ಮ ಪ್ರತಿಕ್ರಿಯೆಯೂ ನಮಗೆ ಅತ್ಯಮೂಲ್ಯ. **ಕಥೆ, ಕವನ, ಸಾಹಿತ್ಯ, ತಂತ್ರಜ್ಞಾನ, ಆರೋಗ್ಯ, ಶಿಕ್ಷಣ, ಕ್ರೀಡೆ, ಕೃಷಿ, ಅಪರೂಪದ ವ್ಯಕ್ತಿಗಳು, ಅಂಕಣ, ಮಹಿಳೆ ಮತ್ತು ಮಕ್ಕಳು ಸೇರಿದಂತೆ ವಿವಿಧ ಕ್ಷೇತ್ರಗಳ** ಕುರಿತಾದ ನಿಮ್ಮ ಬರಹಗಳನ್ನೆಲ್ಲ ಸ್ವೀಕರಿಸುತ್ತೇವೆ ಆದರೆ, ಕಳುಹಿಸಿದ ಬರಹಗಳಲ್ಲಿ ಸಮಂಜಸ ಎನಿಸುವುದಷ್ಟೇ ಪ್ರಕಟಿಸುತ್ತೇವೆ. ನಮ್ಮ ನಂಬುಗೆಯ ಸಮಾಜಕ್ಕಾಗಿ ಒಳಿತನ್ನೇ ಬಯಸುತ್ತ, ಬರೆಯುತ್ತ ಎಲ್ಲರೂ ಒಳ ಗೊಳ್ಳೋಣ.

**ಸಂಪಾದಕರು: ಹಂಪಿ ಟೈಮ್ಸ್, ಶ್ರೀ ಓಂಕಾರೇಶ್ವರ ದೇವಸ್ಥಾನದ ಪಕ್ಕದಲ್ಲಿ, ವಾಲ್ಮೀಕಿ ವೃತ್ತದ ಹತ್ತಿರ, ಹೊಸಪೇಟೆ, ವಿಜಯನಗರ ಜಿಲ್ಲೆ.** ಇ-ಮೇಲ್:hampitimes@gmail.com
M: 94486 33038

## ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತುಲೋಪ, ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ.
ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
– ಜಾಹೀರಾತು ವ್ಯವಸ್ಥಾಪಕರು.

# ಮಕ್ಕಳಿಗೆ ರಕ್ಷಣೆ ಕಲ್ಪಿಸುವುದು ಅಧಿಕಾರಿಗಳ ಕರ್ತವ್ಯ

## ಆಯೋಗದ ಅಧ್ಯಕ್ಷ ಡಾ.ಕೆ.ನಾಗಣ್ಣ ಗೌಡ ಹೇಳಿಕೆ | ಆರ್.ಟಿ.ಇ, ಪೋಕ್ಸೋ ಮತ್ತು ಬಾಲನ್ಯಾಯ ಕಾಯ್ದೆ ಅನುಷ್ಠಾನ

■ **ಹಂಪಿ ಟೈಮ್ಸ್ ಬಳ್ಳಾರಿ**

ಮಕ್ಕಳು ದೇಶದ ಆಸ್ತಿ, ಅವರ ಸುರಕ್ಷತೆಗೆ ರಕ್ಷಣೆ ಕಲ್ಪಿಸುವುದು ಎಲ್ಲಾ ಅಧಿಕಾರಿಗಳ ಮುಖ್ಯ ಕರ್ತವ್ಯವಾಗಿದೆ ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಅಧ್ಯಕ್ಷ ಕೆ.ನಾಗಣ್ಣ ಗೌಡ ಅವರು ಹೇಳಿದರು.

ಬುಧವಾರ ನಗರದ ಜಿಲ್ಲಾ ಪಂಚಾಯತ್‌ನ ನಜೀರ್ ಸಾಬ್ ಸಭಾಂಗಣದಲ್ಲಿ ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಅಧ್ಯಕ್ಷರು ಮತ್ತು ಎಲ್ಲಾ ಸದಸ್ಯರ ಉಪಸ್ಥಿತಿಯಲ್ಲಿ ಆರ್.ಟಿ.ಇ-2009, ಪೋಕ್ಸೋ-2012 ಹಾಗೂ ಬಾಲ ನ್ಯಾಯ ಕಾಯ್ದೆ-2015 ರ ಅನುಷ್ಠಾನದ ಕುರಿತು ಜಿಲ್ಲಾ ಮತ್ತು ತಾಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಮಕ್ಕಳ ಪಾಲನಾ ಸಂಸ್ಥೆಗಳ ಮುಖ್ಯಸ್ಥರೊಂದಿಗೆ ಮಕ್ಕಳಿಗೆ ಸಂಬಂಧಿಸಿದ ಕಾರ್ಯಕ್ರಮ, ಯೋಜನೆಗಳ ಕುರಿತು ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಮಕ್ಕಳ ಕುರಿತು ಕಾರ್ಯನಿರ್ವಹಿಸುವ ಎಲ್ಲಾ ಇಲಾಖೆಗಳು ಮಕ್ಕಳ ಹಕ್ಕುಗಳ ರಕ್ಷಣೆಗೆ ಮತ್ತು ಮಕ್ಕಳನ್ನು ಮುಖ್ಯವಾಹಿನಿಗೆ ತರಲು ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕಿದೆ ಎಂದರು.



ಜಿಲ್ಲೆಯಲ್ಲಿ 2024 ಏಪ್ರಿಲ್ ನಿಂದ 2025 ಮಾರ್ಚ್ ವರೆಗೆ ಒಟ್ಟು 123 ಬಾಲ್ಯವಿವಾಹ ಪ್ರಕರಣ ತಡೆಯಲಾಗಿದೆ. ಅದರಲ್ಲಿ 11 ಬಾಲ್ಯವಿವಾಹ ಪ್ರಕರಣ ನಡೆದಿದ್ದು, 11 ಪ್ರಕರಣಗಳಿಗೆ ಎಫ್‌ಐಆರ್ ದಾಖಲಿಸಲಾಗಿದೆ. ಅದರಂತೆ 2025 ರ ಏಪ್ರಿಲ್ ನಿಂದ ಮೇ ವರೆಗೆ ಒಟ್ಟು 45 ಬಾಲ್ಯವಿವಾಹ ಪ್ರಕರಣ ತಡೆಯಲಾಗಿದೆ. ಅದರಲ್ಲಿ 11 ಬಾಲ್ಯವಿವಾಹ ಪ್ರಕರಣ ನಡೆದಿದ್ದು, 04 ಪ್ರಕರಣಗಳಿಗೆ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ರಕ್ಷಣಾಧಿಕಾರಿ ಎಳೆ ನಾಗಪ್ಪ ಸಭೆಗೆ ವಿವರಿಸಿದರು.

ಇದಕ್ಕೆ ಅಧ್ಯಕ್ಷರು ಪ್ರತಿಕ್ರಿಯಿಸಿ, ಬಾಲ್ಯ ವಿವಾಹ ಘಟನೆ ನಡೆದಲ್ಲಿ ತಕ್ಷಣವೇ ಸಂಬಂಧಿಸಿದ ಅಧಿಕಾರಿಗಳು, ಹುಡುಗ-ಹುಡುಗಿಯ ಮನೆಗೆ ಭೇಟಿ ನೀಡಿ ಪೋಷಕರ ಜೊತೆ ಆಪ್ತಸಮಾಲೋಚನೆ ನಡೆಸಿ, ಮುಚ್ಚಳಿಕೆ ಪತ್ರ ಬರೆಸಿಕೊಳ್ಳಿ, ಸುಖ-ಸಂಸಾರ ಜೀವನಕ್ಕಾಗಿ 18 ವರ್ಷ ತುಂಬಿದ ನಂತರವೇ ವಿವಾಹ ಮಾಡಿಸಬೇಕು ಎಂದು ತಿಳಿಯಪಡಿಸಬೇಕು. ಈ ಕುರಿತು ಆಯಾ ಗ್ರಾಪಂ ಪಿಡಿಒ, ತಾಲ್ಲೂಕು ತಹಶೀಲ್ದಾರ್, ಇಒ, ಶಿಕ್ಷಣ ಇಲಾಖೆ, ಆರೋಗ್ಯ ಇಲಾಖೆ, ಪೊಲೀಸ್ ಇಲಾಖೆ, ಮಕ್ಕಳ ರಕ್ಷಣಾ ಘಟಕ ಅಧಿಕಾರಿಗಳು ಸಮನ್ವಯತೆ ಹೊಂದಬೇಕು. ಒಂದು ವೇಳೆ ಬಾಲ್ಯವಿವಾಹ ಘಟನೆ ನಡೆದಿದ್ದಲ್ಲಿ ಎಫ್‌ಐಆರ್ ದಾಖಲಿಸುವಲ್ಲಿ ಪ್ರಕ್ರಿಯೆ ವಿಳಂಬವಾಗಬಾರದು ಎಂದು ನಿರ್ದೇಶನ ನೀಡಿದರು.

**ಪೊಲೀಸ್ ಪರಿಶೀಲನಾ ಪ್ರಮಾಣ ಪತ್ರ:**

ಜಿಲ್ಲೆಯಲ್ಲಿ ವಿವಿಧ ಶೈಕ್ಷಣಿಕ ಸಂಸ್ಥೆಗಳು, ವಿವಿಧ ವಸತಿ ನಿಲಯಗಳಲ್ಲಿ ನೇಮಕಗೊಳ್ಳುವ ಅತಿಥಿ ಶಿಕ್ಷಕರು, ಹೊರಗುತ್ತಿಗೆ ನೌಕರರ ಕುರಿತು ಪೊಲೀಸ್ ಪರಿಶೀಲನಾ ಪ್ರಮಾಣ ಪತ್ರ ಕಡ್ಡಾಯವಾಗಿ ಪರಿಶೀಲಿಸಬೇಕು. ಈ ಕುರಿತು ಸರ್ಕಾರದ ನಿರ್ದೇಶನವಿದೆ ಎಂದರು.

ಆಯೋಗದ ಸದಸ್ಯ ಶಶಿಧರ ಕೊಸಂಬೆ ಮಾತನಾಡಿ, ಪೋಕ್ಸೋದಂತಹ ಪ್ರಕರಣಗಳಿಗೆ ನಿಯಂತ್ರಿಸಲು ಶಿಕ್ಷಣ ಇಲಾಖೆ ಅನೇಕ ಮುಂಜಾಗ್ರತ ಕ್ರಮಗಳನ್ನು ಪಾಲಿಸಬೇಕಿದೆ. ಅನಧಿಕೃತ ಕೋಚಿಂಗ್ ಸೆಂಟರ್‌ಗಳ ಕಡಿವಾಣ ಹಾಕಬೇಕಿದೆ. ಎಲ್ಲಾ ಶಿಕ್ಷಣ ಸಂಸ್ಥೆಗಳ ಕಚೇರಿ ಆವರಣದಲ್ಲಿ ಕಡ್ಡಾಯವಾಗಿ ಮಕ್ಕಳ ಸಹಾಯವಾಣಿ ಸಂಖ್ಯೆ ಮತ್ತು ಬಾಲ್ಯ ವಿವಾಹ ಕುರಿತು ನಾಮಫಲಕ, ಗೋಡೆ ಬರಹ ಬರೆಸಬೇಕು ಎಂದು ಸೂಚಿಸಿದರು.

ಜಿಲ್ಲೆಯಲ್ಲಿ 2024 ಏಪ್ರಿಲ್ 1 ರಿಂದ 2025 ಮಾರ್ಚ್ 31 ರವರೆಗೆ 897 ಬಾರಿ ದಾಳಿ ನಡೆಸಿದ್ದು, ಅದರಲ್ಲಿ 44 ಬಾಲ ಮತ್ತು ಕಿಶೋರ ಕಾರ್ಮಿಕ ಮಕ್ಕಳನ್ನು ರಕ್ಷಿಸಲಾಗಿದ್ದು, ಒಟ್ಟು 30 ಪ್ರಕರಣ ಕಂಡುಬಂದಿವೆ. 30 ಪ್ರಕರಣಗಳನ್ನು ಎಫ್‌ಐಆರ್ ದಾಖಲಿಸಲಾಗಿದೆ. 9 ಪ್ರಕರಣಗಳಿಗೆ ಶಿಕ್ಷೆ ಆಗಿದೆ. ಇದರಿಂದ 1.80 ಲಕ್ಷ ದಂಡ ವಸೂಲು ಮಾಡಲಾಗಿದೆ ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿ ಸಭೆಗೆ ತಿಳಿಸಿದರು.

ಅಬಕಾರಿ ಇಲಾಖೆ ಗ್ರಾಮೀಣ ಭಾಗಗಳಲ್ಲಿ ಅಕ್ರಮ ಮದ್ಯ ಮಾರಾಟದ ವಿರುದ್ಧ ಕ್ರಮ ವಹಿಸಬೇಕು. ಇಲಾಖೆಯಿಂದ ಮೇಲ್ವಿಚಾರಣೆ ಹೆಚ್ಚಿಸಬೇಕು ಎಂದು ಸೂಚಿಸಿದರು.

ಈ ವೇಳೆ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ವಿಜಯಲಕ್ಷ್ಮಿ ಮೈದೂರು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರವಿಕುಮಾರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿ ರಾಮಕೃಷ್ಣ ನಾಯಕ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಎಳೆ ನಾಗಪ್ಪ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

Printed by: MANJUNATHA .H .B Published by: A. SHUBHA. Owned by: A. SHUBHA and Printed at : AMRITH PRINTERS, No. 63/A, Opp. Police Station, Ramanagara, Hagaribommanahalli – 583212, Vijayanagara Dist., Karnataka. Published at : At Ward No.15, Near Bannimahankali Temple, 3rd Cross, New Amaravathi, Hospet - 583201, Vijayanagara Dist., Karnataka. Editor : BASAPUR BASAVARAJA, PRGI No:KARKAN/2023/88055

• Admissions
• Requirements
• Firm Branding
• Public Notice
• Change of Name

"Thousands of eyes, one newspaper. 'Hampi Times' delivers your message directly to Hampi Times engaged readers."

HAMPI TIMES Kannada Daily
Print & Digital News Paper

BOOK NOW!
Scan to Read

• Obituary
• Remembrance
• Birthday wish ads
• Events Display &
• Classified ads

# HAMPI TIMES, Bamboo Bazaar, Nr Valmiki Circle, Hosapete-583201, Vijayanagara Dist. 9482599089 / 9448633038

ಮೈಕ್ರೋ ನ್ಯೂಸ್

## ಶುಲ್ಕ ಮರುಪಾವತಿ ಕಾರ್ಯಕ್ರಮ: ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಹಂಪಿ ಟೈಮ್ಸ್ ಕೊಪ್ಪಳ**

ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ಒದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು, 2024–25 ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ ಶುಲ್ಕ ಮರುಪಾವತಿ ಕಾರ್ಯಕ್ರಮಕ್ಕೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಕೆ ಅವಧಿಯನ್ನು ಜೂನ್ 30 ರವರೆಗೆ ವಿಸ್ತರಿಸಲಾಗಿದೆ.

ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕ ಸಂಸ್ಥೆಗಳ ಮನವಿ ಮೇರೆಗೆ ಹೈಕೋರ್ಟ್ ಮಧ್ಯಂತರ ಆದೇಶದಂತೆ ರಾಜೀವ್ ಗಾಂಧಿ ವಿಶ್ವವಿದ್ಯಾಲಯದ ಕೋರ್ಸುಗಳಿಗೆ ಶುಲ್ಕ ಮರುಪಾವತಿ ಕಾರ್ಯಕ್ರಮಕ್ಕೆ ಮಾತ್ರ ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸಲಾಗಿದೆ.

ಅರ್ಜಿಯನ್ನು https://ssp.postmatric.karnataka.gov.in ಮೂಲಕ ಸಲ್ಲಿಸಬೇಕು. ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿ ವೇತನ್ನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ವೆಬ್‌ಸೈಟ್ https://bcwd.karnataka.gov.in/ ಇಲಾಖಾ ಸಹಾಯವಾಣಿ: 8050770005, ಮತ್ತು ದೂ.ಸಂ: 1902 ಗೆ ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

## ಜೂ.20 ರಂದು ಜಿಲ್ಲಾ ಮಟ್ಟದ ಜಾಥಾ ಮತ್ತು ಹದಿಹರೆಯದ ಹೆಣ್ಣುಮಕ್ಕಳ ಸಮಾವೇಶ

**ಹಂಪಿ ಟೈಮ್ಸ್ ಬಳ್ಳಾರಿ**

ರೀಡ್ಸ್ ಸಂಸ್ಥೆ, ಮಕ್ಕಳ ವಿಶೇಷ ಪೊಲೀಸ್ ಘಟಕ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರ ಸಂಯುಕ್ತಾಶ್ರಯದಲ್ಲಿ ಜೂ.20 ರಂದು ಮಧ್ಯಾಹ್ನ 12 ಗಂಟೆಗೆ ನಗರದ ಬಿ.ಡಿ.ಎ.ಎ ಸಭಾಂಗಣದಲ್ಲಿ ಬಾಲ್ಯವಿವಾಹ ನಿಷೇಧ ಕಾಯ್ದೆ–2006, ಪೋಕ್ಸೋ ಕಾಯ್ದೆ ಮತ್ತು ಬಾಲ ಕಾರ್ಮಿಕ ಪದ್ಧತಿ ನಿಷೇದದ ಬಗ್ಗೆ ಹದಿಹರೆಯದ ಹೆಣ್ಣುಮಕ್ಕಳಿಗೆ ಜಿಲ್ಲಾಮಟ್ಟದ ಸಮಾವೇಶ ಏರ್ಪಡಿಸಲಾಗಿದೆ.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್.ಎನ್. ಹೊಸಮನೆ ಅವರು ಅಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾಮಟ್ಟದ ಜಾಥಾವನ್ನು ಉದ್ಘಾಟನೆ ಮಾಡುವರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ.ಶೋಭಾರಾಣಿ ವಿ.ಜೆ ಅವರು ಸಮಾವೇಶ ಉದ್ಘಾಟಿಸುವರು. ರೀಡ್ಸ್ ಸಂಸ್ಥೆಯ ಅಧ್ಯಕ್ಷ ಸಿ. ತಿಪ್ಪೇಶಪ್ಪ ಅವರು ಅಧ್ಯಕ್ಷತೆ ವಹಿಸುವರು.

ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ವಿಜಯಲಕ್ಷ್ಮಿ ಮೈದೂರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ರಾಮಕೃಷ್ಣ ನಾಯಕ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರಕ್ಷಣಾಧಿಕಾರಿ ಎಳೆ ನಾಗಪ್ಪ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ನಿಕಟಪೂರ್ವ ಸದಸ್ಯರಾದ ಡಾ.ಹೆಚ್.ಸಿ.ರಾಘವೇಂದ್ರ, ವಕೀಲರಾದ ಶಿವಲೀಲಾ, ಸೈಬರ್ ಕ್ರೈಂ ಪೊಲೀಸ್ ಠಾಣೆಯ ಡಿ.ವೈ.ಎಸ್.ಪಿ. ಸಂತೋಷ್ ಚೌಹಾಣ್ ಸೇರಿದಂತೆ ರೀಡ್ಸ್ ಸಂಸ್ಥೆ ಸಿಬ್ಬಂದಿಗಳು ಹಾಗೂ ಮಕ್ಕಳ ವಿಶೇಷ ಘಟಕ ಸಿಬ್ಬಂದಿ ವರ್ಗ ಇತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

**ಸುತ್ತ ಮುತ್ತ ಕುಂದು-ಕೊರತೆ**

ನಿಮ್ಮ ಸುತ್ತಮುತ್ತ ಮೂಲಭೂತ ಸೌಲಭ್ಯಗಳ ಕೊರತೆ, ನಿರ್ವಹಣೆ ನಿರ್ಲಕ್ಷ್ಯ, ಮಳೆ ಹಾನಿ ನೀವು ಕಣ್ಣಾರೆ ಕಂಡಿದ್ದೀರಾ? ಹಾಗಾದರೆ ಕೂಡಲೇ ಫೋಟೊ ಕ್ಲಿಕ್ಕಿಸಿ, ವೀಡಿಯೋದೊಂದಿಗೆ ನಿಮ್ಮ ಅಭಿಪ್ರಾಯಗಳನ್ನು ಹಂಪಿ ಟೈಮ್ಸ್ ದಿನಪತ್ರಿಕೆ 9448633038 ವಾಟ್ಸಪ್ ನಂಬರ್ ಗೆ ಕಳುಹಿಸಿ.

**ಈ ದಿನ ನಮ್ಮದು, ಈ ಕ್ಷಣ ನಮ್ಮದು, ಇರುವ ಈ ದಿನದ ಈ ಕ್ಷಣವನ್ನು ಮನದುಂಬಿ ಜೀವಿಸೋಣ. ಯಾರಿಗಾದರೂ ಏನನ್ನಾದರೂ ಕೊಡಬೇಕು ಎನಿಸಿದರೆ ಕೊಟ್ಟು ಬಿಡಿ....., ಮುಂದೂಡಬೇಡಿ. ಒಳ್ಳೆಯದೇ ನನ್ನಾದರೂ ಹೇಳಬೇಕು ಎಂದೆನಿಸಿದರೆ ಹೇಳಿಬಿಡಿ.... ಮತ್ತೆ ಹೇಳಲು ಸಾಧ್ಯವಾಗದೇ ಹೋಗಬಹುದು. ನಿಮ್ಮ ಬದುಕಿನ ಈ ಅಮೂಲ್ಯ ಕ್ಷಣಗಳು ಮತ್ತೆ ಮರಳಿ ಬಾರದೆ ಹೋಗಬಹುದು. ಜೀವನವನ್ನು ಮನದುಂಬಿ ಆನಂದಿಸಿ, ಜೀವಿಸಿ ಪ್ರೀತಿಸಿ...... ಈ ಕ್ಷಣ ಮಾತ್ರ ನಿಮ್ಮದು.**

# ವಿಮಾನ ದುರಂತ ಕ್ಷಣಿಕ ಜೀವನ

ಅದೊಂದು ದಂಪತಿಗಳ ಜೋಡಿ ತಮ್ಮ ಮೂರು ಮಕ್ಕಳನ್ನು ಕರೆದುಕೊಂಡು ಹೊಸ ಬದುಕನ್ನು ಅರಸಿ ವಿದೇಶಕ್ಕೆ ಪಯಣ ಬೆಳೆಸಿದ್ದರು. ತಾನಿರುವ ಉದ್ಯೋಗವನ್ನು ತೊರೆದು ತನ್ನ ಮೂರು ಮಕ್ಕಳನ್ನು ಕಟ್ಟಿಕೊಂಡು ಗಂಡನೊಡನೆ ದೂರ ವಿದೇಶದಲ್ಲಿ ಅದೆಷ್ಟು ಚಂದದ ಬದುಕಿನ ಕನಸನ್ನು ಆಕೆ ಕಂಡಿದ್ದಳೋ! ದೇವರೇ ಬಲ್ಲ.

ತಂದೆಯ ಅಂತ್ಯಸಂಸ್ಕಾರಕ್ಕೆಂದು ದೂರ ವಿದೇಶದಿಂದ ಬಂದ ಮಗ ತಾಯಿಯೊಂದಿಗೆ ಕೆಲ ದಿನ ಇದ್ದು ಆಕೆಯ ನೋವನ್ನು ಮರೆಸಿ ನೆಮ್ಮದಿಯ ನಿಟ್ಟುಸಿರಿನೊಂದಿಗೆ ಪಯಣ ಬೆಳೆಸಿದ..... ಆದರೆ ತಾನು ಶಾಶ್ವತವಾಗಿ ತನ್ನ ತಾಯಿಗೆ ಮಗನ ಅಗಲಿಕೆಯ ನೋವನ್ನು ಕೊಡುವೆನೆಂಬ ಕಿಂಚಿತ್ ಅರಿವು ಆತನಿಗೆ ಇರಲಿಲ್ಲ.

ಮತ್ತೊಬ್ಬ ಹೆಣ್ಣು ಮಗಳು ಮದುವೆ ಆದ ನಂತರ ದೂರ ವಿದೇಶದಲ್ಲಿ ನೆಲೆಸಿದ ಪತಿಯನ್ನು ಮೊದಲ ಬಾರಿ ಭೇಟಿಯಾಗುವ ಕನಸು ಹೊತ್ತು ಪಯಣ ಬೆಳೆಸಿದ್ದಳು. ಪತಿಯೊಂದಿಗಿನ ಮಧುರ ಕ್ಷಣಗಳ ಅದೆಷ್ಟು ಕನಸನ್ನು ಆಕೆ ಕಂಡಿದ್ದಳು ಯಾರಿಗೆ ಗೊತ್ತು? ವಿಧಿಯ ಅಟ್ಟಹಾಸ!

ಮತ್ತೊಂದು ದಂಪತಿಗಳ ಜೋಡಿ ತಮ್ಮ ಮಗನನ್ನು ಕಾಣಲು ಆತನೊಂದಿಗೆ ಕೆಲ ದಿನಗಳನ್ನು ಕಳೆಯಲು ಬೆಳೆಸಿದ ಪಯಣ ಅವರ ಅಂತಿಮ ಪಯಣವಾಗಿತ್ತು ಎಂಬುದನ್ನು ಅರಿಯದೆ ಹೋದರು.

ಅಷ್ಟು ದೊಡ್ಡ ಅಪಘಾತವಾಗಿ 200ಕ್ಕೂ ಹೆಚ್ಚು ಜನ ಆ ಅಪಘಾತದಲ್ಲಿ ಹೇಳ ಹೆಸರಿಲ್ಲದಂತೆ ಬೂದಿಯಾಗಿ ಹೋದರೆ ಅದೃಷ್ಟವಶಾತ್ ಒಬ್ಬಾತ ಒಂದು ಗೀರು ಗಾಯವಿಲ್ಲದೆ ತುರ್ತು ನಿರ್ಗಮನ ದ್ವಾರದಿಂದ ಹೊರಬಂದಿದ್ದಾನೆ.... ಆದರೆ ಆತನ ಜೊತೆಗಿದ್ದ ಸಹೋದರ ಸುಟ್ಟು ಹೋಗಿದ್ದಾನೆ. ಇದೆಲ್ಲವೂ ಬಿಡಿ! ಆ ದೈತ್ಯ ಲೋಹದ ಹಕ್ಕಿಯಲ್ಲಿದ್ದವರು ಅವರಾಗಿದ್ದರು.... ಆದರೆ ಭವಿಷ್ಯದಲ್ಲಿ ವೈದ್ಯರಾಗಿ ಭವ್ಯ ಬದುಕಿನ ಕನಸನ್ನು ಕಂಡ ಆ ಯುವ ವಿದ್ಯಾರ್ಥಿಗಳು ಊಟದ ಹಾಲಿನಲ್ಲಿ ಕುಳಿತು ಊಟ ಮಾಡುವಾಗ ಸಾವು ತಮ್ಮನ್ನು ಬೆಂಬತ್ತಿದೆ ಎಂದುಬಹುಶಹಕನಸುಮನಸ್ಸಿನಲ್ಲೂಯೋಚಿಸಿರಲಿಕ್ಕಿಲ್ಲ... ಅಲ್ಲವೇ?

ಕೇವಲ ಎರಡು ದಿನಗಳ ಹಿಂದೆ ಅಹಮದಾಬಾದ್ ನಿಂದ ಲಂಡನ್ ಗೆ ಹೊರಟ ವಿಮಾನವೊಂದು ರನ ವೇಯಿಂದ ಹಾರಿ ಗಗನಕ್ಕೆ ಏರುವ ಮುನ್ನವೇ ತಾಂತ್ರಿಕ ದೋಷದಿಂದ ದುರ್ಘಟನೆಗೆ ಈಡಾಗಿದ್ದು 230 ಕ್ಕೂ ಹೆಚ್ಚು ಜನ ಪ್ರಯಾಣಿಕರನ್ನು ಗುರುತು ಪರಿಚಯವಿಲ್ಲದ ರೀತಿಯಲ್ಲಿ ಸುಟ್ಟು ಹಾಕಿದೆ ಎಂದರೆ ಇದನ್ನು ವಿಧಿಯ ವಿಪರ್ಯಾಸ ಎನ್ನದೆ ಮತ್ತಿನ್ನೇನು ಹೇಳಬೇಕು. ಮನಸ್ಸು ಒಂದೆಡೆ ವಿಷಾದದಿಂದ ಮಿಡಿದರೆ ಮತ್ತೊಂದೆಡೆ ಪರಿಸ್ಥಿತಿಯ



ವಿಪರ್ಯಾಸಗಳನ್ನು ಅವಲೋಕಿಸುತ್ತದೆ. ಯಾರದೋ ತಾಯಿ, ಯಾರದೋ ಮನೆಯ ಮಗಳು, ಯಾರದೋ ಮನೆಯ ಮಗ, ಯಾವುದೋ ಕುಟುಂಬದ ಹಿರಿಯ ಹೀಗೆ ಎಲ್ಲರೂ ಭಗದಗಿಸುವ ಬೆಂಕಿಯ ಜ್ವಾಲೆಯಲ್ಲಿ ಸುಟ್ಟು ಬೂದಿಯಾಗಿದ್ದಾರೆ ಅವರ ಗುರುತು ಕೂಡ ಸಿಗುತ್ತಿಲ್ಲ ಶವಗಳು ಯಾರವು ಎಂಬುದನ್ನು ಅತಿ ಶೀಘ್ರವಾಗಿ ಪತ್ತೆ ಹಚ್ಚಲು ಎಲ್ಲ ಶವಗಳ ಹಲ್ಲುಗಳ ಡಿಎನ್‌ಎ ಪರೀಕ್ಷೆಯನ್ನು ನಡೆಸಲಾಗುತ್ತಿದೆ. ದಂತ ವೈದ್ಯಕೀಯ ಕಾಲೇಜಿನ ಪ್ರೊಫೆಸರ್ಗಳಿಗೆ ಸ್ನಾತಕೋತ್ತರ ದಂತ ವೈದ್ಯಕೀಯ ಪದವಿಯ ವಿದ್ಯಾರ್ಥಿಗಳು ಈ ನಿಟ್ಟಿನಲ್ಲಿ ಸಹಾಯ ಮಾಡುತ್ತಿದ್ದಾರೆ. 200 ಕ್ಕೂ ಹೆಚ್ಚು ಜನರು ಕೇವಲ 25 ಸೆಕೆಂಡುಗಳಲ್ಲಿ ಸುಟ್ಟು ಕರಕಲಾಗಿದ್ದಾರೆ ಎಂದರೆ ಅಲ್ಲಿ ಉಂಟಾದ (1000ಡಿಗ್ರಿ) ಶಾಖ ಎಷ್ಟಿರಬಹುದು ಎಂಬ ಒಂದು ಅಂದಾಜನ್ನು ನೀವು ಮಾಡಬಹುದು.

ಬದುಕು ಜಟಕಾಬಂಡಿ ವಿಧಿ ಅದರ ಸಾಹೇಬ
ಕುದುರೆ ನೀ ಅವನು ಪೇಳ್ದಂತೆ ಪಯಣಿಗರು
ಮದುವೆಗೋ ಮಸಣಕೋ ಹೋಗೆಂದ ಕಡೆಗೋಡು
ಪದ ಕುಸಿಯೇ ನೆಲವಿಹುದು
ಮಂಕುತಿಮ್ಮ



ವೀಣಾ ಹೇಮಂತಗೌಡ ಪಾಟೀಲ್
ಲೇಖಕರು, ಮುಂಡರಗಿ, ಗದಗ

Scan For Digital Colourful
HAMPI TIMES E-paper

ಎಂಬ ಡಿವಿಜಿಯವರ ಮಂಕುತಿಮ್ಮನ ಕಗ್ಗದ ಸಾಲುಗಳು ಬದುಕಿನ ಸಾರ್ವಕಾಲಿಕ ಸತ್ಯವನ್ನು ಅನಾವರಣ ಮಾಡುತ್ತವೆ. ಜೂನ್ 12, 2025 ರಂದು ಮಧ್ಯಾಹ್ನ 1:30ರ ಸುಮಾರಿಗೆ ಸರ್ದಾರ್ ವಲ್ಲಭಭಾಯಿ ಪಟೇಲ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಇಂಗ್ಲೆಂಡಿನ ಗ್ಯಾಟವಿಕ್ ನಗರಕ್ಕೆ ಪ್ರಯಾಣಿಸುತ್ತಿದ್ದ ಏರ್ ಇಂಡಿಯಾದ ಬೋಯಿಂಗ್ 787–8 ನಾಗರಿಕ ವಿಮಾನವು ರನ ವೇಯಿಂದ ಮೇಲೆ ಹಾರಿದ ಕೇವಲ 25 ಸೆಕೆಂಡುಗಳಲ್ಲಿ ತಾಂತ್ರಿಕ ದೋಷದಿಂದ ಉಂಟಾದ ಅಪಘಾತಕ್ಕೀಡಾಗಿದ್ದು ವಿಮಾನದಲ್ಲಿದ್ದ ಪ್ರಯಾಣಿಸುತ್ತಿದ್ದ 230 ಕ್ಕೂ ಹೆಚ್ಚು ಪಯಾಣಿಕರು ಮತ್ತು 12ಕ್ಕೂ ಹೆಚ್ಚು ವಿಮಾನಯಾನ ಸಂಸ್ಥೆಯ ಸಿಬ್ಬಂದಿಗಳು ಜೊತೆಗೆ ಪಕ್ಕದ ಮೆಗಾನಿ ನಗರದ ಬಿಜೆ ಮೆಡಿಕಲ್ ಕಾಲೇಜಿನ ವಿದ್ಯಾರ್ಥಿಗಳ ಹಾಸ್ಟೆಲ್ನ ಊಟದ ಹಾಲ್ಗೆ ಡಿಕ್ಕಿ ಹೊಡೆಯಿತು. ಅಪಘಾತದ ತೀವ್ರತೆ ಎಷ್ಟಿತ್ತೆಂದರೆ ಪರಿಣಾಮವಾಗಿ ಅಲ್ಲಿದ್ದ ಕೆಲ ವಿದ್ಯಾರ್ಥಿಗಳು ಕೂಡ ಸಾವಿನ ಮನೆ ಸೇರಿದರು.. ಅದೃಷ್ಟವಶಾತ್ ವಿಮಾನದಲ್ಲಿದ್ದ ಕೇವಲ ಓರ್ವ ವ್ಯಕ್ತಿ ಬಚಾವಾದ. ಮತ್ತೆ ಕೆಲ ಜನ ಅಹಮದಾಬಾದ್ನ ವಿಪರೀತ ಜನದಟ್ಟಣೆಯಿಂದ, ಅಂತಿಮ ಕ್ಷಣದಲ್ಲಿ ಟಿಕೆಟ್ ಕ್ಯಾನ್ಸಲ್ ಮಾಡಿದವರು ಈ ದುರಂತದಿಂದ ಪಾರಾದರು. ಕೆಲವೇ ಕ್ಷಣಗಳ ಹಿಂದೆ ಬದುಕಿದ್ದವರು ಹೇಳಲು ಹೆಸರಿಲ್ಲದಂತೆ ಸುಟ್ಟು ಹೋಗಿದ್ದಾರೆ. 270ಕ್ಕೂ ಹೆಚ್ಚು ಮೃತ ದೇಹಗಳನ್ನು ಆಸ್ಪತ್ರೆಯ ಶವಾಗಾರದಲ್ಲಿರಿಸಿ ಡಿಎನ್‌ಎ ಪರೀಕ್ಷೆ ಮಾಡಿ ಅವರ ಸಂಬಂಧಿಕರಿಗೆ ಹಸ್ತಾಂತರಿಸುವ ಕೆಲಸದಲ್ಲಿ ಆಸ್ಪತ್ರೆಯ ವೈದ್ಯರು ಹಗಲಿರುಳೆನ್ನದೆಅವಿರತವಾಗಿಕಾರ್ಯನಿರ್ವಹಿಸುತ್ತಿದ್ದಾರೆ. ಬದುಕಿನ ಕ್ಷಣಿಕತೆಯನ್ನು ಸಾರುವ ಈ ದುರಂತವು ದೇಶದ ಮಾತ್ರವಲ್ಲ, ಇಡೀ ಜಗತ್ತಿನ ಜನರಿಗೆ ನೋವನ್ನು ಉಂಟು ಮಾಡಿದೆ. ಯಾವುದೇ ಸಂಬಂಧ ಇಲ್ಲದಿದ್ದರೂ ಕೂಡ ಕಣ್ಣೀರನ್ನು ಹಾಕಿಸಿದೆ. ಬದುಕಿನ ಕ್ಷಣಿಕತೆಯ ಮಹತ್ವದ ಪಾಠವನ್ನು ಕಲಿಸಿದೆ. ದೂರದ ರಾಜ್ಯಗಳಲ್ಲಿ ವಾಸವಾಗಿದ್ದ ಜನ ರಜೆ ಕಳೆಯಲು ಕಾಶ್ಮೀರಕ್ಕೆ ಹೋಗಿ ಅಲ್ಲಿ ದುಷ್ಕರ್ಮಿಗಳ ಗುಂಡಿಗೆ ಬಲಿಯಾಗಿ ಸಾವಿನ ಮನೆ ಸೇರಿದರು. ನಮ್ಮ ನೆಚ್ಚಿನ ತಂಡ ಪ್ರಶಸ್ತಿ ಗೆದ್ದು ತವರಿಗೆ ಮರಳಿದಾಗ ಅವರನ್ನು ಎದುರುಗೊಳ್ಳಲು ಹೋದವರು ಕಾಲ್ತುಳಿತದಲ್ಲಿ ಮರಣ ಹೊಂದಿದರು. ಭವಿಷ್ಯವನ್ನರಸಿ, ಮಕ್ಕಳನ್ನು ನೋಡಲು, ಅಂತ್ಯ ಸಂಸ್ಕಾರಕ್ಕೆ ಹೀಗೆ ಹತ್ತು ಹಲವು ಕಾರಣಗಳನ್ನು ಇಟ್ಟುಕೊಂಡು ವಿಮಾನ ಏರಿದವರು ನಾಮಾವ ಶೇಷವಾದರು. ಹಾಸ್ಟೆಲಿನ ತಮ್ಮ ಕೋಣೆಯಲ್ಲಿ ಆಹಾರ ಸೇವಿಸುತ್ತಿದ್ದವರು ಇನ್ನಿಲ್ಲವಾದರು. ಇದು ಬದುಕಿನ ನಿಜವಾದ ಸತ್ಯ. ಬಾರದು ಬಪ್ಪದು ಬಪ್ಪದು ತಪ್ಪದು ಎಂಬ ಮಾತಿನಂತೆ ಅವರವರ ಸಾವು ಈ ಮುಂಚೆ ನಿರ್ಧರಿತವಾಗಿದ್ದರೆ ಅದನ್ನು ತಪ್ಪಿಸಲು ಯಾರಿಂದಲೂ ಸಾಧ್ಯವಿಲ್ಲ, ನಿಜ ಆದರೆ ಈ ದುರ್ಘಟನೆಗಳು ನಮಗೆ "ನಮ್ಮ ಬದುಕು ತಾವರೆ ಎಲೆಯ ಮೇಲಿನ ನೀರಿನ ಹನಿಯಂತೆ" ಎಂಬುದನ್ನು ಮತ್ತೆ ಒತ್ತಿ ಒತ್ತಿ ಹೇಳುತ್ತೇವೆ. ಬದುಕಿರುವ ನಾಲ್ಕು ದಿನ ಎಲ್ಲರೊಂದಿಗೆ ಪ್ರೀತಿ, ಹೊಂದಾಣಿಕೆ, ಸಾಮರಸ್ಯ ಮತ್ತು ಸಹಬಾಳ್ವೆಯೊಂದಿಗೆ ನಾವು ಜೀವಿಸಬೇಕು. ನಾಳೆಗಾಗಿ ಎಂದು ಸಂತಸದ ದಿನಗಳನ್ನು ಮುಂದೂಡಬಾರದು.

ಈ ದಿನ ನಮ್ಮದು, ಈ ಕ್ಷಣ ನಮ್ಮದು, ಇರುವ ಈ ದಿನದ ಈ ಕ್ಷಣವನ್ನು ಮನದುಂಬಿ ಜೀವಿಸೋಣ.

ಯಾರಿಗಾದರೂ ಏನನ್ನಾದರೂ ಕೊಡಬೇಕು ಎನಿಸಿದರೆ ಕೊಟ್ಟು ಬಿಡಿ....., ಮುಂದೂಡಬೇಡಿ. ಒಳ್ಳೆಯದೇ ನನ್ನಾದರೂ ಹೇಳಬೇಕು ಎಂದೆನಿಸಿದರೆ ಹೇಳಿಬಿಡಿ.... ಮತ್ತೆ ಹೇಳಲು ಸಾಧ್ಯವಾಗದೇ ಹೋಗಬಹುದು. ನಿಮ್ಮ ಬದುಕಿನ ಈ ಅಮೂಲ್ಯ ಕ್ಷಣಗಳು ಮತ್ತೆ ಮರಳಿ ಬಾರದೆ ಹೋಗಬಹುದು. ಜೀವನವನ್ನು ಮನದುಂಬಿ ಆನಂದಿಸಿ, ಜೀವಿಸಿ ಪ್ರೀತಿಸಿ...... ಈ ಕ್ಷಣ ಮಾತ್ರ ನಿಮ್ಮದು.

# ಸ್ಪರ್ಧಾತ್ಮಕ ಜಗತ್ತಿಗೆ ಉತ್ಪಾದನಾ ಕೌಶಲ್ಯವೇ ನಿರ್ಣಾಯಕ

ನಾವು ಪ್ರತಿದಿನ ಲೆಕ್ಕವಿಲ್ಲದಷ್ಟು ಕೆಲಸಗಳನ್ನು ಮಾಡಬೇಕಾಗುತ್ತದೆ. ಅಧ್ಯಯನ, ಮನೆಯ ಕೆಲಸ, ವೈಯಕ್ತಿಕ ಗುರಿಗಳು ಇತ್ಯಾದಿ.. ಈ ಎಲ್ಲವನ್ನು ಸಮರ್ಪಕವಾಗಿ ನಿರ್ವಹಿಸಲು ನಾವು ಉತ್ಪಾದಕವಾಗಿರಬೇಕಾಗುತ್ತದೆ. ದಿನಚರಿಯ ಸರಿಯಾದ ಯೋಜನೆ, ಆದ್ಯತೆಗಳನ್ನು ಗುರುತಿಸಿಕೊಳ್ಳುವುದು, ಸಮಯವನ್ನು ವ್ಯರ್ಥ ಮಾಡದೇ ಉಪಯೋಗಿಸುವುದು ನಮ್ಮ ಜೀವನವನ್ನು ಹೆಚ್ಚು ಸುಗಮವಾಗಿಸುತ್ತದೆ. ಉತ್ಪಾದಕ ವ್ಯಕ್ತಿಯು ಒತ್ತಡವಿಲ್ಲದೆ, ಶ್ರದ್ಧೆಯಿಂದ, ಗುರಿಯತ್ತ ಸಾಗಬಲ್ಲರು. ಉದ್ಯೋಗದ ಸ್ಥಳದಲ್ಲಿ ಹೆಚ್ಚು ಉತ್ಪಾದಕರಾಗಿರುವವರನ್ನು ಎಲ್ಲರೂ ಇಷ್ಟಪಡುತ್ತಾರೆ. ಅವರು ತಮ್ಮ ಗುರಿಯನ್ನು ನಿಖರವಾಗಿ ತಲುಪುತ್ತಾರೆ ಮತ್ತು ತಂಡದ ಮೇಲಿನ ಒತ್ತಡವನ್ನು ಕೂಡ ಕಡಿಮೆ ಮಾಡುತ್ತಾರೆ. ಉತ್ಪಾದಕತೆ ಎಂದರೆ ಕಡಿಮೆ ಸಮಯದಲ್ಲಿ ಹೆಚ್ಚು ಕೆಲಸವನ್ನು ಪರಿಣಾಮಕಾರಿಯಾಗಿ ಮಾಡುವ ಸಾಮರ್ಥ್ಯ. ಇದು ಸಮಯ, ಶ್ರಮ ಮತ್ತು ಸಂಪನ್ಮೂಲಗಳನ್ನು ಸಮರ್ಥವಾಗಿ ಬಳಸುವುದನ್ನು ಸೂಚಿಸುತ್ತದೆ. ಉತ್ತಮ ಉತ್ಪಾದಕತೆ ಎಂದರೆ ಕಡಿಮೆ ಸಮಯದಲ್ಲಿ ಹೆಚ್ಚಿನ ಫಲಿತಾಂಶಗಳನ್ನು ತಲುಪುವುದು. ಉತ್ಪಾದಕತೆಯನ್ನು ಅಭಿವೃದ್ಧಿಪಡಿಸುವುದಕ್ಕೆ ಕೆಲವು ಮಾರ್ಗಗಳು: ಸಮಯ ನಿರ್ವಹಣೆ: ಕೆಲಸಗಳಿಗಾಗಿ ಸರಿಯಾದ ಯೋಜನೆ ಮಾಡುವುದು ಮತ್ತು ಆದ್ಯತೆಗಳನ್ನು ನಿಗದಿಪಡಿಸುವುದು. ಗುರಿಗಳನ್ನು ಹೊಂದುವುದು: ಸ್ಪಷ್ಟವಾದ ದೀರ್ಘಕಾಲಿಕ ಮತ್ತು ಕಿರಿದಾದ ಅವಧಿಯ ಗುರಿಗಳನ್ನು ಹೊಂದುವುದು. ದೊಡ್ಡ ಕಾರ್ಯಗಳನ್ನು ಚಿಕ್ಕ–ಚಿಕ್ಕ ಕಾರ್ಯಗಳನ್ನಾಗಿ ವಿಂಗಡಿಸುವುದರಿಂದ ಒತ್ತಡವನ್ನು ಕಡಿಮೆಗೊಳಿಸಬಹುದು. ಗುರಿಗಳನ್ನು ನಿರ್ದಿಷ್ಟ, ಅಳೆಯಬಹುದಾದ,ಸಾಧಿಸಬಹುದಾದ, ಪ್ರಸ್ತುತ ಮತ್ತು ಸಮಯಕ್ಕೆ ಅನುಗುಣವಾಗಿ ರೂಪಿಸುವುದು. ಪ್ರೇರಿತವಾಗಿರಲು ಮತ್ತು ಅಗತ್ಯ ಹೊಂದಾಣಿಕೆಗಳನ್ನು ಮಾಡಲು ಪ್ರಗತಿಯನ್ನು ನಿಯಮಿತವಾಗಿ ಮೇಲ್ವಿಚಾರಣೆ ಮಾಡಿಕೊಳ್ಳುವುದು ಕೂಡ ಮಹತ್ವದ ಸಂಗತಿಯಾಗಿದೆ. ಸಣ್ಣ ಸಣ್ಣ ಗೆಲುವುಗಳನ್ನು ಸಂಭ್ರಮಿಸುವುದರತ್ತ ಗಮನಹರಿಸುವುದು. ಕೆಲಸದ ನಂತರ ಸಣ್ಣ ವಿರಾಮಗಳನ್ನು ತೆಗೆದುಕೊಳ್ಳುವುದು. ಮಾನಸಿಕ ಒತ್ತಡವನ್ನು ಕಡಿಮೆ ಮಾಡುವುದು, ವಿಶ್ರಾಂತಿಗೂ ಕೂಡ ಸಮಯವನ್ನು ನೀಡುವುದು. ಕಾರ್ಯಕ್ಷಮತೆಯನ್ನು ಹೆಚ್ಚಿಸಲು ಸಾಧನಗಳನ್ನು ಮತ್ತು ಆ್ಯಪ್ ಗಳನ್ನು ಉಪಯೋಗಿಸುವುದು. ಭವಿಷ್ಯದ ಯೋಜನೆ ಮಾಡುವುದು: ಪ್ರತಿ ದಿನದ ಕೆಲಸಗಳನ್ನು ಮೊದಲೇ ತಯಾರಿಸಿಕೊಂಡು ಕಾರ್ಯಚಟುವಟಿಕೆ ಪ್ರಾರಂಭಿಸುವುದು. ಉತ್ಪಾದಕತೆ ಅಭ್ಯಾಸದಿಂದ ಬರುತ್ತದೆ. ನಿತ್ಯದ ಸಣ್ಣ ಬದಲಾವಣೆಗಳ ಮೂಲಕ ಹೆಚ್ಚು ಫಲಪ್ರದವಾಗಬಹುದು.



ರಾಜು. ಭೂಶೆಟ್ಟಿ, ಹುಬ್ಬಳ್ಳಿ

Scan For Digital Colourful
HAMPI TIMES E-paper

ಉತ್ಪಾದಕತೆ ಎಂಬುದು ಕೇವಲ ವ್ಯಕ್ತಿಗಷ್ಟೇ ಅಲ್ಲ, ಅದು ಸಮಾಜ ಮತ್ತು ದೇಶದ ಆರ್ಥಿಕ ಬೆಳವಣಿಗೆಯಲ್ಲೂ ಮಹತ್ತರ ಪಾತ್ರ ವಹಿಸುತ್ತದೆ. ಉದ್ಯೋಗಿಗಳು, ರೈತರು, ಉದ್ಯಮಿಗಳು, ವಿದ್ಯಾರ್ಥಿಗಳು ಎಲ್ಲರೂ ತಮ್ಮತಮ್ಮಕ್ಷೇತ್ರದಲ್ಲಿಹೆಚ್ಚುಉತ್ಪಾದಕವಾಗಿದ್ದರೆ, ದೇಶದ ಅಭಿವೃದ್ಧಿ ವೇಗವಾಗಿ ಸಾಗುತ್ತದೆ. ಕಡಿಮೆ ಸಂಪನ್ಮೂಲ ಗಳನ್ನು ಬಳಸಿಕೊಂಡು ಹೆಚ್ಚು ಉತ್ಪಾದನೆ ಮಾಡುವ ಮೂಲಕ ದೇಶದ ಆರ್ಥಿಕತೆಯೂ ಬಲಗೊಳ್ಳುತ್ತದೆ. ಉತ್ಪಾದಕತೆ ಯಿಂದ ಮನಸ್ಸಿಗೆ ಶಾಂತಿಯನ್ನು ತರುತ್ತದೆ. ದಿನದ ಕೊನೆಗೆ ನಾವು ಏನಾದರೂ ಸಾಧನೆ ಮಾಡಿದ್ದೇವೆ ಎಂಬ ಭಾವನೆ ನಮ್ಮ ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ ಹಾಗೂ ಮುಂದಿನ ದಿನದ ಕೆಲಸಗಳಿಗೂ ಪ್ರೇರಣೆ ನೀಡುತ್ತದೆ.



ಒಟ್ಟಾರೆಯಾಗಿ ಉತ್ಪಾದಕತೆ ಜೀವನದ ಎಲ್ಲ ಕ್ಷೇತ್ರಗಳಲ್ಲಿಯೂ ಅನಿವಾರ್ಯ. ಇದು ಸಮಯದ ಮೌಲ್ಯವನ್ನು ಅರಿಯುವಂತೆ ಮಾಡುತ್ತದೆ. ಗುರಿ ತಲುಪುವ ಬಲವನ್ನು ನೀಡುತ್ತದೆ ಮತ್ತು ಬದುಕನ್ನು ಸುಧಾರಿಸುತ್ತದೆ. ಹೀಗಾಗಿ ದಿನನಿತ್ಯದ ಜೀವನದಲ್ಲಿ ಉತ್ಪಾದಕತೆಯನ್ನು ಬೆಳೆಸಿಕೊಳ್ಳಬೇಕು. ಅದು ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಅನಿವಾರ್ಯವೂ ಕೂಡ ಹೌದು.

ಕಾರ್ಯಕ್ಷಮತೆಯನ್ನು ಹೆಚ್ಚಿಸಲು ಕೆಲವು ನಿರ್ಣಾಯಕ ಉತ್ಪಾದನಾ ಕೌಶಲ್ಯಗಳೆಂದರೆ– ಸಮಸ್ಯೆ ಪರಿಹರಿಸುವ ಕೌಶಲ್ಯಗಳು, ಉತ್ತಮ ಸಂವಹನ ಕೌಶಲ್ಯಗಳು, ಆದ್ಯತೆ ನೀಡುವ ಕೌಶಲ್ಯಗಳು–ಒಂದಕ್ಕಿಂತ ಹೆಚ್ಚು ಕೆಲಸ ಮಾಡುವ ಸಂದರ್ಭ ಬಂದಾಗ ಒಂದೇ ಸಮಯದಲ್ಲಿ ಎಲ್ಲ ಕೆಲಸಗಳನ್ನು ಮುಗಿಸುವುದು ಅಸಾಧ್ಯದ ಮಾತು. ಹೀಗಾಗಿ ಆ ಕೆಲಸಗಳಲ್ಲಿ ತಕ್ಷಣ ಮುಗಿಸಬೇಕಾದ ಕೆಲಸಕ್ಕೆ ಆದ್ಯತೆ ನೀಡಬೇಕಾಗುತ್ತದೆ. ಸಮಯ ನಿರ್ವಹಣಾ ಕೌಶಲ್ಯ, 'ನಾವು ಸಮಯಕ್ಕೆ ಬೆಲೆ ಕೊಡದಿದ್ದರೆ, ಸಮಯವೂ ನಮಗೆ ಬೆಲೆ ಕೊಡುವುದಿಲ್ಲ' ಎಂಬ ಮಾತಿದೆ. ಕೆಲಸ–ಕಾರ್ಯಗಳಿಗೆ ನಿರ್ದಿಷ್ಟ ವೇಳಾಪಟ್ಟಿಯನ್ನು ಹಾಕಿಕೊಂಡು ನಿರ್ವಹಿಸಿದಾಗ ಮಾತ್ರ ಯಶಸ್ಸು ನಮ್ಮದಾಗುತ್ತದೆ. ತಂಡವಾಗಿ ಕಾರ್ಯನಿರ್ವಹಿಸುವ ಕೌಶಲ್ಯಗಳು–ಬೆಟ್ಟದಷ್ಟು ಸಮಸ್ಯೆಗಳಿದ್ದರೂ ಕೂಡ ಒಂದು ತಂಡವಾಗಿ ಕಾರ್ಯ ನಿರ್ವಹಿಸಿದಾಗ ಅವೆಲ್ಲವೂ ಕರಗಿ ಹೋಗುತ್ತವೆ. ನಿರ್ಧಾರ ತೆಗೆದುಕೊಳ್ಳುವ ಕೌಶಲ್ಯಗಳು– ಕೆಲವು ಸಂದರ್ಭಗಳಲ್ಲಿ ನಿರ್ಧಾರ ತೆಗೆದುಕೊಳ್ಳುವುದು ವಿಳಂಬವಾಗುವುದರಿಂದಲೂ ಹಾನಿ ಉಂಟಾಗಬಹುದು, ತಕ್ಷಣದ ನಿರ್ಧಾರವೂ ಕೂಡ ಹಾನಿಯನ್ನುಂಟು ಮಾಡಬಲ್ಲದು. ಹೀಗಾಗಿ ಸಮಯಕ್ಕೆ ಸರಿಯಾಗಿ ತೆಗೆದುಕೊಳ್ಳುವ ನಿರ್ಧಾರವೂ ಉತ್ಪಾದಕತೆಯ ಲಕ್ಷಣವಾಗಿದೆ. ಒಂದು ಮನೆಯ ಕಟ್ಟಡವನ್ನು ಪ್ರಾರಂಭಿಸಲು ನಿರ್ಣಯ ತೆಗೆದುಕೊಳ್ಳುವುದನ್ನು ಮುಂದೂಡತ್ತಾ ಹೋದರೆ, ವರ್ಷದಿಂದ ವರ್ಷಕ್ಕೆ ಅದಕ್ಕೆ ಬೇಕಾಗುವ ಹಣದ ಪ್ರಮಾಣವೂ ಏರುತ್ತಾ ಹೋಗುತ್ತದೆ. ಹೀಗಾಗಿ ನಿರ್ಣಯ ತೆಗೆದುಕೊಳ್ಳುವುದು ಕೂಡ ಉತ್ಪಾದನಾ ದೃಷ್ಟಿಯಿಂದ ತುಂಬಾ ನಿರ್ಣಾಯಕವಾಗಿದೆ. ಯಾವುದೇ ಒಂದು ಕಾಮಗಾರಿಯನ್ನು ನಿರ್ದಿಷ್ಟ ಸಮಯದಲ್ಲಿ ಮುಗಿಸದೇ ಮುಂದೂಡುತ್ತಾ ಹೋದಂತೆ ಅದಕ್ಕೆ ತಗಲುವ ವೆಚ್ಚದ ಪ್ರಮಾಣವೂ ಕೂಡ ಏರುತ್ತಾ ಸಾಗುತ್ತದೆ. ಹೀಗಾಗಿ ನಿರ್ದಿಷ್ಟ ಸಮಯ ಹಾಗೂ ಗುರಿಗೆ ತಕ್ಕಂತೆ ಕೆಲಸ ಮಾಡುವುದು ಕೂಡ ಉತ್ಪಾದಕತೆಯ ಭಾಗವಾಗಿದೆ ಎಂದು ಹೇಳಬಹುದು.




## ನಿತ್ಯ ಪಂಚಾಂಗ

ಮಾಸ: ಜ್ಯೇಷ್ಠ | ಸಂವತ್ಸರ: ವಿಶ್ವವಸು

19–06–2025 – ಗುರುವಾರ

| | |
|---|---|
| ತಿಥಿ | : ಅಷ್ಟಮಿ |
| ಪಕ್ಷ | : ಕೃಷ್ಣ |
| ನಕ್ಷತ್ರ | : ಉ.ಭಾದ್ರಪದ |
| ಯೋಗ | : ಸೌಭಾಗ್ಯ |
| ಕರಣ | : ಕೌಳವ |
| ಸೂರ್ಯೋದಯ | : 05:42:52 |
| ಸೂರ್ಯಾಸ್ತ | : 19:13:52 |
| ರಾಹು ಕಾಲ | : 14:10–15:51 |
| ಯಮಘಂಡ ಕಾಲ | : 05:43–07:24 |
| ಗುಳಿಕ ಕಾಲ | : 06:06–10:47 |

## ತುಂಗಭದ್ರಾ ನೀರಿನ ಮಟ್ಟ



ಬುಧವಾರ : 18–06–2025

| | |
|---|---|
| ಗರಿಷ್ಠ ಮಟ್ಟ | 1633 ಅಡಿ |
| ಇಂದಿನ ಮಟ್ಟ | 1606.09 ಅಡಿ |
| ಒಳ ಹರಿವು | 15941 ಕ್ಯುಸೆಕ್ |
| ಹೊರ ಹರಿವು | 160 ಕ್ಯುಸೆಕ್ |
| ಇಂದಿನ ಸಾಮರ್ಥ್ಯ | 30.487 ಟಿಎಂಸಿ |
| ಗರಿಷ್ಠ ಸಾಮರ್ಥ್ಯ | 105.788 ಟಿಎಂಸಿ |

ಕಳೆದ ವರ್ಷ ಇದೇ ದಿನ

| | |
|---|---|
| ಇಂದಿನ ಮಟ್ಟ | 1582.81 ಅಡಿ |
| ಒಳ ಹರಿವು | 801 ಕ್ಯುಸೆಕ್ |
| ಹೊರ ಹರಿವು | 1752 ಕ್ಯುಸೆಕ್ |
| ಸಾಮರ್ಥ್ಯ | 5.979 ಟಿಎಂಸಿ |

ಮೈಕ್ರೋ ನ್ಯೂಸ್

## ವಲಸೆ ತಡೆಗೆ ಉದ್ಯೋಗ ಕಲ್ಪಿಸಿ

ಮೊದಲ ಪುಟದಿಂದ

ಅರಣ್ಯಧಾಮಗಳಿರುವುದರಿಂದ ಪ್ರವಾಸೋದ್ಯಮ ಅಭಿವೃದ್ಧಿಗೆ ಆದ್ಯತೆ ನೀಡಬೇಕಿದೆ ಎಂದರು.

ಹರಪನಹಳ್ಳಿ ಶಾಸಕಿ ಲತಾ ಮಲ್ಲಿಕಾರ್ಜುನ್ ಮಾತನಾಡಿ, ಉದ್ಯೋಗಕ್ಕಾಗಿ ಬೇರೆ ಕಡೆ ಸ್ಥಳೀಯರು ಹೋಗುವುದನ್ನು ತಡೆಯಬೇಕಿದೆ. ನಗರದಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಹೆಚ್ಚಾಗಿದೆ. ನಮ್ಮಲ್ಲಿ 38 ತಾಂಡಗಳಿವೆ. ತಾಂಡಗಳ ಅಭಿವೃದ್ಧಿ ಯಾಗಬೇಕು. ಶೈಕ್ಷಣಿಕ ಕ್ಷೇತ್ರಕ್ಕೆ ಹೆಚ್ಚಿನ ಅದ್ಯತೆ ನೀಡಬೇಕು. ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ಇದ್ದು, ಪರಿಹರಿಸಲು ಮುಂದಾಗಬೇಕು. ಉದ್ಯೋಗ ಸೃಷ್ಟಿ, ರೈತರಿಗೆ ನೆರವು, ಆರೋಗ್ಯ ಕ್ಷೇತ್ರದ ಸುಧಾರಣೆಯಾಗಬೇಕಿದೆ ಎಂದು ಸಮಿತಿಯ ಗಮನಕ್ಕೆ ತಂದರು.

ಹೊಸಪೇಟೆ ಶಾಸಕ ಹೆಚ್.ಆರ್.ಗವಿಯಪ್ಪ ಮಾತನಾಡಿ, ಜಿಲ್ಲೆಯ ಅರ್ಥಿಕ ಅಭಿವೃದ್ಧಿಗೆ ಪ್ರವಾಸೋದ್ಯಮದ ಬಹಳ ಮುಖ್ಯವಾಗಿದೆ. ಪ್ರವಾಸಿತಾಣ ಹಂಪಿ ಸೇರಿ ವಿವಿಧ ಕ್ಷೇತ್ರಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಬೇಕು. ಜಿಲ್ಲೆಯಲ್ಲಿ ಸಕ್ಕರೆ ಕಾರ್ಖಾನೆ ಸೇರಿ ವಿವಿಧ ಕಾರ್ಖಾನೆಗಳನ್ನು ಸ್ಥಾಪಿಸಬೇಕಿದೆ. ರೈತರ ಬೆಳೆಗಳಿಗೆ ಬೆಂಬಲ ಬೆಲೆ, ಉದ್ಯೋಗ ಸೃಷ್ಟಿ, ನೀರಾವರಿಗೆ ಗಮನಹರಿಸಬೇಕಿದೆ. ಜಿಲ್ಲಾ ಕೇಂದ್ರದಲ್ಲಿ ಸೂಪರ್ ಸ್ಪೆಶಾಲಿಟಿ ಆಸ್ಪತ್ರೆಗಳು, ವೈದಕೀಯ ಕಾಲೇಜು, ಸಣ್ಣ ಉದ್ಯಮಗಳಿಗೂ ಹೆಚ್ಚಿನ ಉತ್ತೇಜನ ನೀಡಬೇಕು. ಶಿಕ್ಷಣ ಸಂಸ್ಥೆಗಳಿಗೆ ಮೂಲ ಸೌಕರ್ಯ, ವಿದ್ಯಾರ್ಥಿಗಳಿಗೆ ಕ್ರೀಡಾ ಕ್ಷೇತ್ರದಲ್ಲಿ ಪ್ರೋತ್ಸಾಹ, ಕೃಷಿ ಆಧಾರಿತ ಕೈಗಾರಿಕೆಗಳು, ರೇಷ್ಮೆ ಅಭಿವೃದ್ಧಿ ಪುನಶ್ಚೇತನ ಕಾರ್ಯಗಳಲ್ಲಿ ಪ್ರಗತಿ ಸಾಧಿಸಬೇಕಿದೆ ಎಂದರು.

ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್, ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯ ಸದಸ್ಯರಾದ ಪ್ರೊ.ಡಾ. ಎಸ್.ಟಿ.ಬಾಗಲಕೋಟೆ, ಡಾ.ಸಂಗೀತಾ ಕಟ್ಟಿ ವೇದಿಕೆಯಲ್ಲಿದ್ದರು. ಕೃಷಿ ಇಲಾಖೆ ಜಂಟಿ ನಿರ್ದೇಶಕ ಶರಣಪ್ಪ ಮುದಗಲ್, ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಚಿದಾನಂದ್ ಪೂಜಾರ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಶ್ವೇತಾ, ಜಿಲ್ಲಾ ಆರೋಗ್ಯ ಅಧಿಕಾರಿ ಡಾ.ಶಂಕರನಾಯ್ಕ.ಎಲ್. ಆರ್, ಆರ್‌ಸಿಹೆಚ್ ಅಧಿಕಾರಿ ಡಾ.ಜಂಬಯ್ಯ, ಶಿಕ್ಷಣ ಇಲಾಖೆ ಡಿಡಿಪಿಐ ವೆಂಕಟೇಶ್ ರಾಮಚಂದ್ರಪ್ಪ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಹೆಚ್.ವಿ.ಮಂಜುನಾಥ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

# ಮಾನವೀಯ ನೆಲೆಗಟ್ಟಿನಲ್ಲಿ ಕರ್ತವ್ಯ ನಿರ್ವಹಿಸಿ

**ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಅಧ್ಯಕ್ಷ ಕೆ.ನಾಗಣ್ಣ ಗೌಡ ಹೇಳಿಕೆ | ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧ' ಎಲ್ಲಾ ಸರ್ಕಾರಿ ಕಚೇರಿಗಳ ಕಡತಗಳ ಮೇಲೆ ಮುದ್ರಿಸಿ. ಮಕ್ಕಳ ಸಹಾಯವಾಣಿ ಸಂಖ್ಯೆ ಗೋಡೆ ಬರಹ, ನಾಮಫಲಕ ಕಡ್ಡಾಯ | ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸೂಚನೆ.**




**ಹಂಪಿ ಟೈಮ್ಸ್ ಹೊಸಪೇಟೆ**

ಸರ್ಕಾರದ ಎಲ್ಲಾ ಕಚೇರಿಗಳಲ್ಲಿ ಕಾನೂನಾತ್ಮಕ ದಾಖಲೆಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ಕಡತಗಳ ಮೇಲೆ ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧ ಎಂಬ ಟ್ಯಾಗ್‌ಲೈನ್ ಮುದ್ರಿಸುವಂತೆ ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಅಧ್ಯಕ್ಷ ಕೆ.ನಾಗಣ್ಣ ಗೌಡ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಅಧ್ಯಕ್ಷರು ಮತ್ತು ಎಲ್ಲಾ ಸದಸ್ಯರ ಉಪಸ್ಥಿತಿಯಲ್ಲಿ ಆರ್.ಟಿ.ಇ–2009, ಪೋಕ್ಸೋ–2012 ಹಾಗೂ ಬಾಲ ನ್ಯಾಯ ಕಾಯಿದೆ–2015ರ ಅನುಷ್ಠಾನದ ಕುರಿತು ಜಿಲ್ಲಾ ಮತ್ತು ತಾಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಮಕ್ಕಳ ಪಾಲನಾ ಸಂಸ್ಥೆಗಳ ಮುಖ್ಯಸ್ಥರೊಂದಿಗೆ ಮಕ್ಕಳಿಗೆ ಸಂಬಂಧಿಸಿದ ಕಾರ್ಯಕ್ರಮ, ಯೋಜನೆಗಳ ಕುರಿತ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಂಗಳವಾರ ಮಾತನಾಡಿದರು. ಮಕ್ಕಳ ಕುರಿತು ಕಾರ್ಯನಿರ್ವಹಿಸುವ ಎಲ್ಲಾ ಇಲಾಖೆಗಳು ಮಕ್ಕಳ ಹಕ್ಕುಗಳ ರಕ್ಷಣೆಗೆ ಮತ್ತು ಮಕ್ಕಳನ್ನು ಮುಖ್ಯವಾಹಿನಿಗೆ ತರಲು ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕಿದೆ. ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಆರೋಗ್ಯ ಇಲಾಖೆ, ಪೊಲೀಸ್ ಇಲಾಖೆ, ಪಂಚಾಯತ್ ರಾಜ್, ಕೃಷಿ, ತೋಟಗಾರಿಕೆ ಸೇರಿದಂತೆ ಎಲ್ಲಾ ಇಲಾಖೆಗಳಲ್ಲಿ ಮಕ್ಕಳಿಗೋಸ್ಕರ ಸೇವೆ ಮಾಡುವ ಸದಾವಕಾಶ ಇದೆ. ಮಕ್ಕಳೊಂದಿಗೆ ಹೆಚ್ಚು ಸಮಯ ಕಳೆಯಿರಿ, ಅವರನ್ನು ಅರ್ಥ ಮಾಡಿಕೊಳ್ಳಿ, ಅವರಿಗಾಗಿ ಉತ್ತಮ ಸೇವೆ ನೀಡಬೇಕು. ರಾಜ್ಯದಲ್ಲಿ ಬಾಲ ನ್ಯಾಯ ಕಾಯ್ದೆಯನ್ನು ಸಮರ್ಪಕವಾಗಿ ಜಾರಿಗೊಳಿಸಲು ಎಲ್ಲಾ ಇಲಾಖೆ ಅಧಿಕಾರಿಗಳಿಗೆ ತರಬೇತಿ ನೀಡುವ ಅಗತ್ಯವಿದೆ. ಪೋಕ್ಸೋ ಪ್ರಕರಣಗಳು, ಬಾಲ್ಯ ವಿವಾಹಗಳು ನಿಯಂತ್ರಿಸಲು ಸರ್ಕಾರದ ಸುತ್ತೋಲೆಗಿಂತ ಮಾನವೀಯ ನೆಲೆಗಟ್ಟಿನಲ್ಲಿ ಕರ್ತವ್ಯ ನಿರ್ವಹಿಸಬೇಕಿದೆ. ಎಲ್ಲಾ ಶಾಲೆಗಳಲ್ಲಿ ಮಕ್ಕಳ ರಕ್ಷಣಾ ನೀತಿ ಬಗ್ಗೆ ಸರ್ಕಾರದ ಪ್ರಮಾಣಿತ ಕಾರ್ಯಾಚರಣಾ ವಿಧಾನಗಳು(ಎಸ್‌ಓಪಿ)ಗಳನ್ನು ಎಲ್ಲಾ ಇಲಾಖೆ ಅಧಿಕಾರಿಗಳು ಅರಿತು ತಮ್ಮ ಇಲಾಖೆ ಸಿಬ್ಬಂದಿಗಳಿಗೆ ಜಾಗೃತಿ ಮೂಡಿಸಬೇಕಿದೆ. ಪ್ರಸ್ತುತದಲ್ಲಿ ಮಕ್ಕಳಿಗೆ ಅನ್‌ಲೈನ್ ಚಟುವಟಿಕೆಗಳು ಮತ್ತು ಮಾದಕ ವಸ್ತುಗಳು ವಿಪರೀತ ಮಾರಕವಾಗಿವೆ. ಅಧಿಕಾರಿಗಳು ಮಕ್ಕಳ ಭವಿಷ್ಯದ ಬಗ್ಗೆ ಚಿಂತನೆ ನಡೆಸಬೇಕಿದೆ ಎಂದರು.

ಆಯೋಗದ ಸದಸ್ಯ ಶಶಿಧರ ಕೊಸಂಬೆ ಮಾತನಾಡಿ, ಪೋಕ್ಸೋದಂತಹ ಪ್ರಕರಣಗಳಿಗೆ ನಿಯಂತ್ರಿಸಲು ಶಿಕ್ಷಣ ಇಲಾಖೆ ಅನೇಕ ಮುಂಜಾಗೃತ ಕ್ರಮಗಳನ್ನು ಪಾಲಿಸಬೇಕಿದೆ. ಅನಧಿಕೃತ ಕೋಚಿಂಗ್ ಸೆಂಟರ್‌ಗಳ ಕಡಿವಾಣ ಹಾಕಬೇಕಿದೆ. ಶಾಲೆಗಳಲ್ಲಿ ಅತಿಥಿ ಶಿಕ್ಷಕರ ನೇಮಕಾತಿಯಲ್ಲಿ ಕಡ್ಡಾಯವಾಗಿ ಪೊಲೀಸ್ ಇಲಾಖೆಯ ನಿರಾಪೇಕ್ಷಣ ಪತ್ರ ಪಡೆಯಬೇಕು. ಶಾಲಾ, ಕಾಲೇಜು ಕಟ್ಟಡಗಳ ಮೇಲೆ ವಿದ್ಯುತ್ ತಂತಿ ಮಾರ್ಗಗಳಿದ್ದರೇ ಸ್ಥಳಾಂತರಿಸಬೇಕು. ಎಲ್ಲಾ ಶಿಕ್ಷಣ ಸಂಸ್ಥೆಗಳ ಕಚೇರಿ ಆವರಣದಲ್ಲಿ ಕಡ್ಡಾಯವಾಗಿ ಮಕ್ಕಳ ಸಹಾಯವಾಣಿ ಸಂಖ್ಯೆ ಮತ್ತು ಬಾಲ್ಯ ವಿವಾಹ ಕುರಿತು ನಾಮಫಲಕ, ಗೋಡೆ ಬರಹ ಬರೆಸಬೇಕು. ಶಿಥಿಲಾವಸ್ಥೆಯಲ್ಲಿರುವ ಕೊಠಡಿಗಳಲ್ಲಿ ಬೋಧನೆಯನ್ನು ತಪ್ಪಿಸಬೇಕು. ವಿದ್ಯಾರ್ಥಿ, ವಿದ್ಯಾರ್ಥಿನಿಯರ ಪ್ರತ್ಯೇಕ ಶೌಚಗೃಹಗಳ ನಿರ್ಮಾಣಕ್ಕೆ ಕ್ರಮ ವಹಿಸಬೇಕು ಎಂದರು.

ಆಯೋಗದ ಸದಸ್ಯರಾದ ಡಾ.ಕೆ.ಟಿ.ತಿಪ್ಪೇಸ್ವಾಮಿ ಮಾತನಾಡಿ, ಹೊಸಪೇಟೆ ಪೊಲೀಸ್ ಠಾಣೆಗಳಲ್ಲಿ ತೆರದ ಮನೆ ಕಾರ್ಯಕ್ರಮವನ್ನು ತೆರೆದ ಬಾಗಿಲು ಎಂದು ತಪ್ಪಾಗಿ ನಮೂದಿಸಲಾಗಿದೆ. ಎಲ್ಲಾ ಪೊಲೀಸ್ ಠಾಣೆಗಳಲ್ಲಿ ಕಡ್ಡಾಯವಾಗಿ ಮಕ್ಕಳ ಸಹಾಯವಾಣಿ ಸಂಖ್ಯೆ ಅಳವಡಿಸಬೇಕು. ವಸತಿ ನಿಲಯಗಳಲ್ಲಿ ಮಕ್ಕಳಿಗೆ ನೀಡುವ ಎಲ್ಲಾ ಸೌಲಭ್ಯಗಳನ್ನು ಸಮರ್ಪಕವಾಗಿ ವಿತರಿಸಬೇಕು. ಬಾಲಕಿಯರ ವಸತಿ ನಿಲಯಗಳಲ್ಲಿ ಮಹಿಳಾ ವಾರ್ಡನ್‌ಗಳನ್ನು ನೇಮಿಸಬೇಕು. ಆರೋಗ್ಯ ಇಲಾಖೆ ಆರ್‌ಬಿಎಸ್‌ಕೆ ತಂಡವನ್ನು ಬಳಸಿಕೊಂಡು ಅಪೌಷ್ಠಿಕತೆಯ ಮಕ್ಕಳಿಗೆ ಗುಣಮಟ್ಟದ ಪೋಷಣೆ ನೀಡುವಲ್ಲಿ ಅಂಗನವಾಡಿ, ಶಿಶು ಅಭಿವೃದ್ಧಿ ಕಲ್ಯಾಣ ಇಲಾಖೆಯೊಂದಿಗೆ ಕೈಜೋಡಿಸಬೇಕಿದೆ ಎಂದರು.

ಆಯೋಗದ ಸದಸ್ಯರಾದ ವೆಂಕಟೇಶ್ ಮಾತನಾಡಿ, ಕೃಷಿ ಮತ್ತು ತೋಟಗಾರಿಕೆ ಇಲಾಖೆಗಳಿಂದ ನಿರ್ಮಿತಗೊಂಡ ಕೃಷಿ ಹೊಂಡಗಳು, ಬೊರವೆಲ್‌ಗಳು ಸುತ್ತ ಸೂಕ್ತ ರಕ್ಷಣಾ ವ್ಯವಸ್ಥೆ ಕಲ್ಪಿಸಬೇಕು. ವಿಫಲಗೊಂಡ ಬೊರವೆಲ್‌ಗಳನ್ನು ಮುಚ್ಚದೇ ಅವಘಡಗಳು ಸಂಭವಿಸಿದರೇ ಅಧಿಕಾರಿಗಳನ್ನು ನೇರಹೊಣೆಗಾರರನ್ನಾಗಿಸಿಪ್ರಕರಣದಾಖಲಿಸಲಾಗುವುದು. ಕೆಎಸ್‌ಆರ್‌ಟಿಸಿ ಎಲ್ಲಾ ಚಾಲಕರಿಗೆ, ನಿರ್ವಾಹಕರಿಗೆ ಪೋಕ್ಸೋ ಕಾಯ್ದೆ, ಬಾಲ ನ್ಯಾಯ ಕಾಯ್ದೆ, ಮಕ್ಕಳ ರಕ್ಷಣಾ ನೀತಿ ಕುರಿತು ತರಬೇತಿ ನೀಡಬೇಕು. ಸ್ಥಳೀಯ ಸಂಸ್ಥೆಗಳ ತ್ಯಾಜ್ಯ ವಿಲೇವಾರಿ ವಾಹನಗಳಲ್ಲಿ ಬಾಲ್ಯ ವಿವಾಹ ವಿರುದ್ಧ ಜಾಗೃತಿ ಮೂಡಿಸುವ ಅಡಿಯೋಗಳನ್ನು ಪ್ರಚಾರ ಪಡಿಸಬೇಕು.

ಆಯೋಗದ ಸದಸ್ಯರಾದ ಶೇಖರಗೌಡ ರಾಮತ್ನಾಳ ಮಾತನಾಡಿ, ಅಬಕಾರಿ ಇಲಾಖೆ ಗ್ರಾಮೀಣ ಭಾಗಗಳಲ್ಲಿ ಅಕ್ರಮ ಮದ್ಯ ಮಾರಾಟದ ವಿರುದ್ಧ ಕ್ರಮ ವಹಿಸಬೇಕು. ಶಾಲಾ ಕಾಲೇಜು, ಹಾಸ್ಟೆಲ್ ಅಕ್ಕಪಕ್ಕದಲ್ಲಿ ಮದ್ಯಮಾರಾಟ ಮಾಡುತ್ತಿರುವ ಬಗ್ಗೆ ಸರ್ವೇ ನಡೆಸಬೇಕು. ಬಾರ್ ಮತ್ತು ರೆಸ್ಟೋರೆಂಟ್‌ಗಳಲ್ಲಿ ಕಡ್ಡಾಯವಾಗಿ ಸಿಸಿ ಕ್ಯಾಮೆರಾ ಅಳವಡಿಸಬೇಕು. ಇಲಾಖೆಯಿಂದ ಮೇಲ್ವಿಚಾರಣೆ ಹೆಚ್ಚಿಸಬೇಕು ಎಂದು ಸೂಚಿಸಿದರು. ಆಯೋಗದ ಸದಸ್ಯರ ಭೇಟಿ ವೇಳೆ ಹಂಪಿ ಗ್ರಾಪಂ ವ್ಯಾಪ್ತಿಯಲ್ಲಿನ ಅಧಿಕಾರಿಗಳ ಕಾರ್ಯವೈಖರಿ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.



ಈ ವೇಳೆ ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್, ಜಿಪಂ ಸಿಇಒ ನೋಂಗ್ಜಾಯ್ ಮೊಹಮ್ಮದ್ ಅಕ್ರಮ್ ಅಲಿ ಷಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀಹರಿಬಾಬು ಬಿ.ಎಲ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಶ್ವೇತಾ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸುದೀಪ್ ಉಂಕಿ ಸೇರಿದಂತೆ ವಿವಿಧ ಇಲಾಖೆ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

# ಕೊಪ್ಪಳ ಜಿಲ್ಲಾಧಿಕಾರಿ ಸುರೇಶ್ ಬಿ ಹಿಟ್ನಾಳ್, ಜಿಪಂ ಸಿಇಒ ವರ್ಣೀ ನೇಗಿ ಅಧಿಕಾರ ಸ್ವೀಕಾರ

**ಹಂಪಿ ಟೈಮ್ಸ್ ಕೊಪ್ಪಳ**

ಕೊಪ್ಪಳ ಜಿಲ್ಲೆಯ ನೂತನ ಜಿಲ್ಲಾಧಿಕಾರಿಗಳಾಗಿ ಸುರೇಶ ಬಿ. ಇಟ್ನಾಳ ಅವರು ಬುಧವಾರ ಅಧಿಕಾರ ಸ್ವೀಕರಿಸಿದರು. ನಿರ್ಗಮಿತ ಜಿಲ್ಲಾಧಿಕಾರಿ ನಲಿನ್ ಅತುಲ್ ಅವರು ನೂತನ ಡಿಸಿ ಅವರಿಗೆ ಅಧಿಕಾರಿ ಹಸ್ತಾಂತರಿದರು.

ಕರ್ನಾಟಕ ಕೇಡರ್ 2016ರ ಐಎಎಸ್ ಬ್ಯಾಚನ ಅಧಿಕಾರಿಯಾದ ಸುರೇಶ ಬಿ. ಹಿಟ್ನಾಳ ಅವರು ಮೂಲತಃ ಕರ್ನಾಟಕದವರಾಗಿದ್ದು, ಅವರು ಈ ಮೊದಲು ಕೊಪ್ಪಳ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಅಪರ ಜಿಲ್ಲಾಧಿಕಾರಿಯಾಗಿ, ಬೆಳಗಾವಿ ಅಧಿವೇಶನದ ವಿಶೇಷಾಧಿಕಾರಿಯಾಗಿ, ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆ ಆಯುಕ್ತರಾಗಿ ಕಾರ್ಯ ನಿರ್ವಹಿಸಿದ್ದಾರೆ. ನಂತರ ಧಾರವಾಡ ಮತ್ತು ದಾವಣಗೆರೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾ ಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ್ದು, ಸದ್ಯ ಕೊಪ್ಪಳ ಜಿಲ್ಲೆಯ ನೂತನ ಜಿಲ್ಲಾಧಿಕಾರಿಗಳಾಗಿ ಅಧಿಕಾರಿ ಸ್ವೀಕರಿಸಿದರು.



ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ್ ಮಾಲಗಿತ್ತಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಜಿಲ್ಲಾಧಿಕಾರಿ ಕಚೇರಿಯ ಅಧಿಕಾರಿ ಸಿಬ್ಬಂದಿಗಳಿದ್ದರು.

**ಹಂಪಿ ಟೈಮ್ಸ್ ಕೊಪ್ಪಳ**

ಕೊಪ್ಪಳ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ ವರ್ಣಿತ್ ನೇಗಿ ಅವರು ಬುಧವಾರ ಅಧಿಕಾರ ಸ್ವೀಕರಿಸಿದರು. ನಿರ್ಗಮಿತ ಸಿಇಓ ರಾಹಲ್ ರತ್ನಂ ಪಾಂಡೇಯ ಅವರು ನೂತನ ಸಿಇಓ ಅವರಿಗೆ ಅಧಿಕಾರಿ ಹಸ್ತಾಂತರಿದರು.

2019ರ ಐಎಎಸ್ ಬ್ಯಾಚ್‌ನ ಅಧಿಕಾರಿಯಾದ ವರ್ಣಿತ್ ನೇಗಿ ಅವರು ಮೂಲತಃ ಛತ್ತೀಸಗಡ ರಾಜ್ಯದವರಾಗಿದ್ದಾರೆ. ಅವರು ಮೊದಲು ತಮ್ಮ ಪ್ರೋಬೇಷನರಿ ಅವಧಿಯನ್ನು ಕೊಪ್ಪಳದಲ್ಲಿ ಮುಗಿಸಿದ ನಂತರ ಮೈಸೂರು ಜಿಲ್ಲೆಯ ಹುಣಸೂರಿನಲ್ಲಿ ಸಹಾಯಕ ಆಯುಕ್ತರಾಗಿ ಕರ್ತವ್ಯ ನಿರ್ವಹಿಸಿ ನಂತರ ಮೈಸೂರು ಆಡಳಿತ ತರಬೇತಿ ಸಂಸ್ಥೆ(ಎ.ಟಿ.ಐ)ನಲ್ಲಿ ಜಂಟಿ ನಿರ್ದೇಶಕರಾಗಿ ಕರ್ತವ್ಯ ನಿರ್ವಹಿಸಿರುತ್ತಾರೆ.

ಬೆಂಗಳೂರಿನ ಗ್ರಾಮಾಂತರ ಜಿಲ್ಲೆ ಹಾಗೂ ಕೊಡಗು ಜಿಲ್ಲೆಯ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾಗಿ ಕರ್ತವ್ಯ ನಿರ್ವಹಿಸಿದ ನಂತರ ಕೆ.ಎಚ್.ಡಿ.ಸಿ ಹುಬ್ಬಳ್ಳಿಯ ಎಂ.ಡಿ ಆಗಿ ಕರ್ತವ್ಯ ನಿರ್ವಸಿದ ಅವರು ಸದ್ಯ ಕೊಪ್ಪಳ ಜಿಲ್ಲೆಯ ನೂತನ ಸಿಇಓ ಆಗಿ ಅಧಿಕಾರ ಸ್ವೀಕರಿಸಿದರು. ಅಧಿಕಾರಿ, ಸಿಬ್ಬಂದಿಗಳಿದ್ದರು.



# ಆದೇಶದಂತೆ ಜೂ.20 ಮತ್ತು 21 ರಂದು ಅಂಚೆ ಕಚೇರಿ ವ್ಯವಹಾರ ಸ್ಥಗಿತ

**ಹಂಪಿ ಟೈಮ್ಸ್ ಕೊಪ್ಪಳ**

ಭಾರತೀಯ ಅಂಚೆ ಇಲಾಖೆಯ ಆದೇಶದಂತೆ ಜೂನ್ 23 ರಂದು ಕೊಪ್ಪಳ ಪ್ರಧಾನ ಅಂಚೆ ಕಚೇರಿಯ ಮತ್ತು ಅದರ ವ್ಯಾಪ್ತಿಯ ಎಲ್ಲಾ ಉಪ ಹಾಗೂ ಶಾಖಾ ಅಂಚೆ ಕಚೇರಿಗಳಲ್ಲಿ ಹೊಸ ತಂತ್ರಾಂಶ (APT 2.0) ಅಳವಡಿಕೆ ಜಾರಿಯಾಗುತ್ತಿರುವ ಹಿನ್ನೆಲೆಯಲ್ಲಿ ಪೂರ್ವ ಸಿದ್ಧತೆಗಾಗಿ ಜೂ.20 ಮತ್ತು 21 ರಂದು ಕೊಪ್ಪಳ ಪ್ರಧಾನ ಅಂಚೆ ಕಚೇರಿ ಮತ್ತು ಅದರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಉಪ ಹಾಗೂ ಶಾಖಾ ಅಂಚೆ ಕಚೇರಿಗಳಲ್ಲಿ ಎಲ್ಲಾ ರೀತಿಯ ವ್ಯವಹಾರ, ವಹಿವಾಟುಗಳು ಸ್ಥಗಿತಗೊಳ್ಳಲಿವೆ.

ಹೊಸ ತಂತ್ರಾಂಶ ಜಾರಿಯಾಗು ತ್ತಿರುವ ಹಿನ್ನೆಲೆಯಲ್ಲಿ ಪೂರ್ವ ಸಿದ್ಧತೆಗಾಗಿ ಮೇಲೆ ತಿಳಿಸಿದ ದಿನಾಂಕಗಳಂದು ಕೊಪ್ಪಳ ಜಿಲ್ಲೆಯ ಅಡಿಯಲ್ಲಿ ಬರುವ ಎಲ್ಲಾ ಅಂಚೆ ಕಚೇರಿಗಳಲ್ಲಿ ಕಾರ್ಯನಿರ್ವಹಣೆ ಸ್ಥಗಿತಗೊಳ್ಳಲಿದ್ದು, ಮೇಲೆ ತಿಳಿಸಿದ ಎರಡು ದಿನಗಳಲ್ಲಿ ಯಾವುದೇ ವಹಿವಾಟುಗಳು ಇರುವುದಿಲ್ಲ.

ಜೂನ್ 23 ರಿಂದ ಕೊಪ್ಪಳ ಜಿಲ್ಲೆಯ ಎಲ್ಲಾ ಅಂಚೆ ಕಚೇರಿಗಳಲ್ಲಿ ಸೇವೆ ಲಭ್ಯವಿರುತ್ತದೆ. ಗ್ರಾಹಕರು ಸಹಕರಿಸಬೇಕೆಂದು ಕೊಪ್ಪಳ ಅಂಚೆ ವಿಭಾಗದ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೂ.25 ರಂದು ಪಿಂಚಣಿ ಅದಾಲತ್

**ಹಂಪಿ ಟೈಮ್ಸ್ ಬಳ್ಳಾರಿ**

ಅಂಚೆ ಇಲಾಖೆಯಿಂದ ನಿವೃತ್ತರಾದ ಸರ್ಕಾರದಿಂದ ಪಿಂಚಣಿ ಪಡೆಯುತ್ತಿರುವ ಇಲಾಖಾ ನೌಕರರಿಗಾಗಿ ಮತ್ತು ಕುಟುಂಬ ಪಿಂಚಣಿ ಪಡೆಯುತ್ತಿರುವ ನಿವೃತ್ತ ಅಂಚೆ ನೌಕರರ ಕುಟುಂಬದವರಿಗಾಗಿ ಜೂ.25 ರಂದು ಸಂಜೆ 04 ಗಂಟೆಗೆ ಬಳ್ಳಾರಿ ವಿಭಾಗೀಯ ಅಂಚೆ ಕಚೇರಿಯಲ್ಲಿ ಪಿಂಚಣಿ ಅದಾಲತ್ ಆಯೋಜಿಸಲಾಗಿದೆ.

ಪಿಂಚಣಿದಾರರು ತಮ್ಮ ಕುಂದು–ಕೊರತೆಗಳಿದ್ದಲ್ಲಿ ಬಳ್ಳಾರಿ ವಿಭಾಗದ ಕೋಟೆ ಪ್ರದೇಶದ ಅಂಚೆ ವಿಭಾಗೀಯ ಕಾರ್ಯಾಲಯ ಅಧೀಕ್ಷಕರ ಕಚೇರಿಗೆ ಜೂ.23 ರೊಳಗಾಗಿ ಮುಂಚಿತವಾಗಿ ತಲುಪುವಂತೆ ಪತ್ರ ಮೂಲಕ ಅಥವಾ doballari.ka@indiapost.gov.in ಗೆ ಇ–ಮೇಲ್ ಮುಖಾಂತರ ಕಳುಹಿಸಿಕೊಡಬಹುದು. ತಮ್ಮ ಅಹವಾಲುನೊಂದಿಗೆ ಜೂ.25 ರಂದು ನಡೆಯುವ ಪಿಂಚಣಿ ಅದಾಲತ್‌ನಲ್ಲಿ ಭಾಗವಹಿಸಬಹುದು.

ಅದಾಲತ್‌ನಲ್ಲಿ ಭಾಗವಹಿಸುವವರಿಗೆ ಯಾವುದೇ ತರಹದ ಭತ್ಯೆ ನೀಡಲಾಗುವುದಿಲ್ಲ ಎಂದು ಬಳ್ಳಾರಿ ವಿಭಾಗ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

14 ಭಾಷೆಗಳಲ್ಲಿ ಸುದ್ದಿ
ನಿಮ್ಮ ಮಾತೃಭಾಷೆಯಲ್ಲಿ ಸುದ್ದಿ, ಲೇಖನ ಓದಿರಿ...
ಹಂಪಿ ಟೈಮ್ಸ್ ವೆಬ್‌ನ್ಯೂಸ್‌ಗಾಗಿ ಭೇಟಿ ನೀಡಿ
www.hampitimes.com